# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –263 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:13–05–2025 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 263 | RNI No: KARKAN/2023/88462 | KA/SK/CTA-874/2024-2026 | Chitradurga | Date: 13-05-2025 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ನೂತನ ಜಿಲ್ಲಾಧಿಕಾರಿ ಕಚೇರಿ ಸಂಕೀರ್ಣ ಶೀಘ್ರ ಪೂರ್ಣ: ಸಚಿವ 2

ಸಂಭ್ರಮ, ಸಡಗರ ಭಕ್ತಿಯಿಂದ ನಡೆದ ಶ್ರೀವೀರಭದ್ರಸ್ವಾಮಿಯ ಭವ್ಯ ರಥೋತ್ಸವ 3

ತುರ್ತುಸ್ಥಿತಿ ಸಂವಹನಕ್ಕಾಗಿ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸೈರನ್ ಅಳವಡಿಸಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಲಾರ್ವಾ ಸಮೀಕ್ಷೆ ಕಾರ್ಯ: ನಗರ ಸ್ವಯಂ ಸೇವಕರ ಆಯ್ಕೆ

» **ಚಿತ್ರದುರ್ಗ**

2025–26ನೇ ಸಾಲಿಗೆ ಜಿಲ್ಲೆಯ ವಿವಿಧ ನಗರ ಪ್ರದೇಶಗಳ ಸಮಸ್ಯಾತ್ಮಕ ವಾರ್ಡ್‌ಗಳಲ್ಲಿ ಈಡೀಸ್ ಲಾರ್ವಾ ಸಮೀಕ್ಷೆ ಕಾರ್ಯವನ್ನು ನಡೆಸಲು ಅನುಷ್ಠಾನ ಮಾರ್ಗಸೂಚಿ ಪ್ರಕಾರ ಕೇವಲ 100 ದಿನಗಳ ಅವಧಿಗೆ ಮಾತ್ರ ತಾತ್ಕಾಲಿಕವಾಗಿ ನಗರ ಸ್ವಯಂ ಸೇವಕರನ್ನು ಆಯ್ಕೆ ಮಾಡಲಾಗುವುದು. ಈ ಅವಧಿಯನ್ನು ವಿಸ್ತರಿಸಲಾಗುವುದಿಲ್ಲ. ಚಿತ್ರದುರ್ಗ ಜಿಲ್ಲೆಯ ಚಿತ್ರದುರ್ಗ ನಗರ–09, ಚಳ್ಳಕೆರೆ ನಗರ–2, ಹಿರಿಯೂರು ನಗರ–2, ಹೊಸದುರ್ಗ ನಗರ–2 ರಂತೆ ನಗರ ಸ್ವಯಂ ಸೇವಕರು ನಗರ ಪ್ರದೇಶಗಳಲ್ಲಿ ಈಡೀಸ್ ಲಾರ್ವಾ ಸಮೀಕ್ಷೆಯನ್ನು ನಡೆಸಲು, ಪ್ರತಿದಿನ ಕಡ್ಡಾಯವಾಗಿ 100 ಮನೆಗಳಿಗೆ ಭೇಟಿ ನೀಡಿ, ಒಳಾಂಗಣ ಮತ್ತು ಹೊರಾಂಗಣದ ಕೃತಕ ನೀರಿನ ಸಂಗ್ರಹಗಳಲ್ಲಿ ಈಡೀಸ್ ಲಾರ್ವಾ ಸಮೀಕ್ಷೆಗೆ ನಡೆಸಲು ದಿನ ಒಂದಕ್ಕೆ ರೂ.200/–ಗಳಂತೆ ಆಯ್ಕೆಗೊಂಡ ಸೇವಕರ ಬ್ಯಾಂಕ್ ಖಾತೆಗಳಿಗೆ ಪಾವತಿ ಮಾಡಲಾಗುವುದು. ಈ ಸಮೀಕ್ಷೆಗೆ ಸೇರ ಬಯಸುವವರು ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಆಗಿರಬೇಕು. ತಮ್ಮ ಸ್ವ–ವಿವರಗಳೊಂದಿಗೆ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಬ್ಯಾಂಕ್ ಪಾಸ್ ಪುಸ್ತಕದ ಮೊದಲನೇ ಪುಟ ಮತ್ತು ಆಧಾರ್ ಕಾರ್ಡ್‌ನ ನಕಲು ಪ್ರತಿಗಳೊಂದಿಗೆ ಇದೇ ಮೇ.14ರಂದು ಬೆಳಿಗ್ಗೆ 10.30 ರಿಂದ ಸಂಜೆ 4.30 ರವರೆಗೆ ಚಿತ್ರದುರ್ಗ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾಗಳ ಕಚೇರಿ ಆವರಣದ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿಯಲ್ಲಿ ದಾಖಲಾತಿ ಪರಿಶೀಲನೆಗೆ ಖುದ್ದು ಹಾಜರಾಗಬೇಕು. ಹಾಜರಾದ ಅಭ್ಯರ್ಥಿಗಳಿಗೆ ಯಾವುದೇ ಭತ್ಯೆ ನೀಡುವುದಿಲ್ಲ. ಮೊದಲು ಬಂದವರಿಗೆ ಆದ್ಯತೆ ನೀಡಲಾಗುವುದು ಎಂದು ಜಿಲ್ಲಾ ರೋಗವಾಹಕಗಳ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮೇ.16 ರಂದು ನೇರ ನೇಮಕಾತಿ ಸಂದರ್ಶನ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಇದೇ ಮೇ.16ರಂದು ಬೆಳಿಗ್ಗೆ 10 ರಿಂದ 2 ರವರೆಗೆ ನೇರ ನೇಮಕಾತಿ ಸಂದರ್ಶನ ನಡೆಯಲಿದೆ. ಈ ಮೇಳದಲ್ಲಿ ವಿವಿಧ ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೊಮಾ, ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿನ ಪುರುಷ, ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿದ್ದು, ಅಭ್ಯರ್ಥಿಗಳು ಅಗತ್ಯ ದಾಖಲೆಗಳಾದ 5 ಬಯೋಡಾಟಾ ಪ್ರತಿಗಳು, ಫೋಟೋಸ್, ವಿದ್ಯಾರ್ಹತೆಯ ಜೆರಾಕ್ಸ್ ಪ್ರತಿಗಳೊಂದಿಗೆ ಭಾಗವಹಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ನಗರದ ಹಳೇ ವೈಶಾಲಿ ಗೇಟ್ ಹತ್ತಿರ, ಸ್ಟೇಡಿಯಂ ತಿರುವು, ಉದ್ಯೋಗ ವಿನಿಮಯ ಕೇಂದ್ರ ಕಚೇರಿ, ಚಿತ್ರದುರ್ಗ ದೂರವಾಣಿ ಸಂಖ್ಯೆ 7022459064, 9945587060, 8105619020 ಗೆ ಸಂಪರ್ಕಿಸಬಹುದು ಎಂದು ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

### ಐಟಿಐ ಪ್ರವೇಶಾತಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಚಳ್ಳಕೆರೆ ನಗರದ ಪಾವಗಡ ರಸ್ತೆಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2025–26ನೇ ಸಾಲಿನ ಪ್ರವೇಶಾತಿಗೆ ಇಎಂ, ಫಿಟ್ಟರ್, ವೆಲ್ಡರ್, ಎಂ ಇ ವಿ, ಸಿಎನ್‌ಸಿ ಹಾಗೂ ಇತರೆ ವೃತ್ತಿಗಳಿಗೆ ಎಸ್ ಎಸ್ ಎಲ್ ಸಿ ಪಾಸಾದಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪ್ರಯುಕ್ತ ಅರ್ಹ ಅಭ್ಯರ್ಥಿಗಳು ಇದರ ಪಡೆದುಕೊಳ್ಳಲು ಕೋರಿದೆ. ಅರ್ಜಿ ಸಲ್ಲಿಕೆ ಈಗಾಗಲೇ ಮೇ 09 ರಿಂದ ಪ್ರಾರಂಭವಾಗಿದ್ದು, ಮೇ. 28 ರವರೆಗೆ ಆನ್‌ಲೈನ್ www.cite.karnataka.gov.in ಇಲ್ಲಿಗೆ ಲಾಗಿನ್ ಆಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಂಸ್ಥೆಯ ಪ್ರಾಚಾರ್ಯ ಬಿ.ಎಂ.ಬಸವಣ್ಣ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9900398732, 8748884498, 9902372315 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಪ್ರಗತಿ ಪರಿಶೀಲನಾ ಸಭೆಯಲ್ಲಿ ಕಂದಾಯ ಸಚಿವ ಕೃಷ್ಣ ಬೈರೇಗೌಡ ಸೂಚನೆ

# ಕಂದಾಯ ಗ್ರಾಮ ರಚನೆ ಪ್ರಕ್ರಿಯೆ ಪೂರ್ಣಗೊಳಿಸಲು ಜೂನ್ 30ರ ಗಡುವು

» **ಚಿತ್ರದುರ್ಗ**

ಮುಂಬರುವ ಜೂನ್ 30 ರೊಳಗಾಗಿ ಜಿಲ್ಲೆಯಲ್ಲಿ ಬಾಕಿ ಇರುವ ಕಂದಾಯ ಗ್ರಾಮಗಳ ರಚನೆಗೆ ಸಂಬಂಧಿಸಿದಂತೆ ಅಂತಿಮ ಅಧಿಸೂಚನೆ ಹೊರಡಿಸಬೇಕು ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲೆಯ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳೆದ ಹಲವಾರು ವರ್ಷಗಳಿಂದ ನೆನೆಗುದಿಗೆಬಿದ್ದಿರುವಹಟ್ಟಿ,ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವ ಕಾರ್ಯ ತ್ವರಿತಗತಿಯಲ್ಲಿ ನಡೆಯಬೇಕು ಎಂದು ಸೂಚನೆ ನೀಡಿದರು.



ಕಂದಾಯ ಗ್ರಾಮಗಳ ರಚನೆಗೆ ಜಿಲ್ಲೆಯಲ್ಲಿ ಒಟ್ಟು 316 ಗ್ರಾಮಗಳ ಗುರುತಿಸಲಾಗಿದ್ದು, ಈಗಾಗಲೇ 296 ಪ್ರಾಥಮಿಕ ಸೂಚನೆ ಹಾಗೂ 206 ಅಂತಿಮ ಅಧಿಸೂಚನೆಯಾಗಿದೆ. ಇನ್ನೂ 61 ಗ್ರಾಮಗಳು ಅಂತಿಮ ಅಧಿಸೂಚನೆಗೆ ಬಾಕಿ ಇದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾಹಿತಿ ನೀಡಿದರು.

ಗ್ರಾಮ ಪಂಚಾಯಿತಿಯಲ್ಲಿ ವಸತಿ ಪ್ರದೇಶಗಳ ಪಟ್ಟಿ ಇದೆ. ಕಂದಾಯ ಗ್ರಾಮಗಳ ಸಂಖ್ಯೆಗಿಂತ ವಸತಿ ಪ್ರದೇಶಗಳ ಸಂಖ್ಯೆ ಹೆಚ್ಚಿದೆ. ಇಲ್ಲಿ ದಾಖಲೆ ರಹಿತ ವಸತಿ ಪ್ರದೇಶಗಳ ಎಂಟ್ರಿ ಇರುತ್ತವೆ. ಕಂದಾಯ ಇಲಾಖೆಯ ಬಳಿ ದಾಖಲೆ ಸಹಿತ ಗ್ರಾಮಗಳ ಮಾಹಿತಿ ಇರುತ್ತದೆ ಎಂದು ತಿಳಿಸಿದ ಅವರು, ದಾಖಲೆ ರಹಿತ ಜನವಸತಿ ಪ್ರದೇಶಗಳನ್ನು ಗಮನಿಸಿ, ಗ್ರಾಮ ರಚನೆ ಮಾಡಬೇಕು.

ದಾಖಲೆ ರಹಿತ ಇದ್ದಲ್ಲಿ ಅವರಿಗೆ ಒಂದು ದಾಖಲೆಕಲ್ಪಿಸಿ,ಬದುಕುಕಲ್ಪಿಸಿಕೊಡಬೇಕಿದೆ. ಈಗಾಗಲೆ ನಗರ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಅನಧಿಕೃತ ನಿವೇಶನ, ಕಟ್ಟಡಗಳಿಗೆ ಬಿ–ಖಾತಾ ವಿತರಣೆಗೆ ಕ್ರಮ ಕೈಗೊಳ್ಳಲಾಗಿದೆ.

ಅದೇ ರೀತಿ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿಯೂ ಅನಧಿಕೃತವಾಗಿ ರಚನೆಯಾಗಿರುವ ಕಂದಾಯ ನಿವೇಶನ, ಕಟ್ಟಡಗಳಿಗೂ ಬಿ–ಖಾತಾ ವಿತರಣೆಗೆ ಸರ್ಕಾರ ನಿರ್ಧಾರ ಕೈಗೊಂಡಿದ್ದು, ಹತ್ತು ದಿನಗಳಲ್ಲಿ ಈ ಪ್ರಕ್ರಿಯೆ ಪ್ರಾರಂಭವಾಗುವ ನಿರೀಕ್ಷೆ ಇದೆ. ಜನರ ಬದುಕಿಗೆ ನಿಶ್ಚಿತತೆ ಇರಬೇಕು. ಹಾಗಾಗಿ ಸರ್ಕಾರ ಈ ಕ್ರಮ ಕೈಗೊಂಡಿದೆ ಎಂದು ಸಚಿವರು ಹೇಳಿದರು.

ಕಂದಾಯ ಗ್ರಾಮಗಳ ರಚನೆ ಕುರಿತಂತೆ ಜೂನ್ 30 ರ ಗಡುವನ್ನು ನಿಗದಿಪಡಿಸಲಾಗಿದ್ದು, ಕೇಂದ್ರ ಸರ್ಕಾರದಿಂದ ಜನಗಣತಿ ಕಾರ್ಯದ ಪ್ರಕ್ರಿಯೆ ಆರಂಭವಾದರೆ, ಹೊಸ ಕಂದಾಯ ಘಟಕಗಳ ರಚನೆಗೆ ನಿಷೇಧ ಅನ್ವಯ ಆಗಲಿದೆ. ಈ ನಿಷೇಧ ತೆರವಾಗಲು ಎರಡು ವರ್ಷ ಆಗಬಹುದು. ಹೀಗಾಗಿ ಬಾಕಿ ಇರುವ ಎಲ್ಲ ಕಂದಾಯ ಗ್ರಾಮಗಳ ರಚನೆ ಕಾರ್ಯ ಜೂ. 30 ರ ಒಳಗಾಗಿ ಪೂರ್ಣಗೊಳ್ಳಬೇಕು ಎಂದು ತಾಕೀತು ಮಾಡಿದರು.

ಗ್ರಾಮದ 1 ಕಿ.ಮೀ ವ್ಯಾಪ್ತಿ ಒಳಗೆ ಇದ್ದು, 10 ಮನೆಗಳಿಗಿಂತಲೂ ಹೆಚ್ಚು ಇದ್ದರೆ ಉಪ ಗ್ರಾಮ ರಚನೆ ಮಾಡಲು ಅವಕಾಶ ಇದೆ. ಜನರಿಗೆ ನಾವು ಸ್ಥಿರ ಬದುಕು ನೀಡಬೇಕು. ಬಿಟ್ಟು ಹೋಗಿರುವ ಕಂದಾಯ ಗ್ರಾಮಗಳ ರಚನೆ ಹಾಗೂ ಗುರುತಿಸುವ ಕಾರ್ಯ ಆಗಬೇಕು. ಈ ನಿಟ್ಟಿನಲ್ಲಿ ಯಾದವ ಹಾಗೂ ತಾಂಡಾ ಸಂಘದವರಿಂದ ಮಾಹಿತಿ ಪಡೆದು ಗ್ರಾಮ ಪಂಚಾಯಿತಿಯಿಂದ ಜನವಸತಿ ಪಟ್ಟಿ ಪಡೆಯುವಂತೆ ಸಚಿವರು ಸೂಚನೆ ನೀಡಿದರು.

**ಭೂ ಸುರಕ್ಷಾ ಯೋಜನೆಗೆ ವೇಗ ನೀಡಿ:** ಭೂ ಸುರಕ್ಷಾ ಯೋಜನೆಯನ್ನು ಭೂ ಕಂದಾಯ ಇಲಾಖೆಯ ಎಲ್ಲಾ ದಾಖಲೆಗಳನ್ನು ಡಿಜಿಟಲೀಕರಣಗೊಳಿಸುವ ಉದ್ದೇಶದಿಂದ ಕೈಗೆತ್ತಿಕೊಳ್ಳಲಾಗಿದ್ದು, ಈ ಯೋಜನೆ ತ್ವರಿತಗತಿಯಲ್ಲಿ ಆಗಬೇಕು ಎಂದು ಕೃಷಿ ಸಚಿವ ಕೃಷ್ಣ ಬೈರೇಗೌಡ ಹೇಳಿದರು.

ಈ ಯೋಜನೆಯಡಿ ಜಿಲ್ಲೆಯಲ್ಲಿ ಚಳ್ಳಕೆರೆ, ಹಿರಿಯೂರು, ಹೊಳಲ್ಕೆರೆ ತಾಲ್ಲೂಕುಗಳು ಉತ್ತಮ ಸಾಧನೆ ತೋರಿದ್ದು, ಉಳಿದ ಮೂರು ತಾಲ್ಲೂಕುಗಳು ಸಹ ತ್ವರಿತಗತಿಯಲ್ಲಿ ಆಗಬೇಕು. ಜಿಲ್ಲೆಯಲ್ಲಿ ಸರಾಸರಿ 10 ಸಾವಿರ ಪುಟಗಳ ಸ್ಕ್ಯಾನ್ ಹಾಗೂ ಅಪ್‌ಲೋಡ್ ಆಗಬೇಕು ಎಂದು ಸಚಿವರು ಸೂಚನೆ ನೀಡಿದರು.

**ಹೊಸಪೇಟೆಯಲ್ಲಿ ಸರ್ಕಾರದ ಎರಡು ವರ್ಷಗಳ ಸಾಧನಾ ಸಮಾವೇಶ:** ಇದೇ ಮೇ.20ರಂದು ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ಸರ್ಕಾರಕ್ಕೆ ಎರಡು ವರ್ಷ ಪೂರ್ಣಗೊಂಡ ಹಿನ್ನಲೆಯಲ್ಲಿ 01 ಲಕ್ಷ ಕುಟುಂಬಗಳಿಗೆ ಹಕ್ಕುಪತ್ರ ವಿತರಣೆ, ವಿವಿಧ ಸವಲತ್ತುಗಳ ವಿತರಣಾ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ನಾವು ಮಾಡಿರುವ ಕೆಲಸವನ್ನು ಜನರಿಗೆ ಸಮರ್ಪಣೆ ಮಾಡುತಿದ್ದೇವೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದರು.

ಇದು 2 ವರ್ಷಗಳ ಸಂಭ್ರಮಾಚರಣೆ ಕಾರ್ಯಕ್ರಮ ಅಲ್ಲ, ನಾವು ಮಾಡಿರುವ ಮಹತ್ವಪೂರ್ಣ ಕಾರ್ಯವನ್ನು ಜನರಿಗೆ ಸಮರ್ಪಿಸಿ, ಅವರ ಬದುಕಿಗೆ ಸ್ಥಿರತೆ ತಂದು ಕೊಡುವ ಅರ್ಥಪೂರ್ಣ ಕಾರ್ಯಕ್ರಮ ಇದಾಗಲಿದೆ. ಜನರಿಗೆ ಶಕ್ತಿ ತುಂಬುವ ಮೂಲಕ ಸರ್ಕಾರದ ಎರಡು ವರ್ಷಗಳ ಸಾಧನೆ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ 1 ಲಕ್ಷಕ್ಕೂ ಹೆಚ್ಚು ಫಲಾನುಭವಿಗಳಿಗೆ ಹಕ್ಕುಪತ್ರ, ದಾಖಲೆ ವಿತರಿಸುವ ಮೂಲಕ ಆಚರಿಸುತ್ತಿದ್ದೇವೆ ಎಂದು ಹೇಳಿದರು.

ವಿವಿಧ ಸವಲತ್ತುಗಳ ವಿತರಣಾ ಕಾರ್ಯಕ್ರಮದಲ್ಲಿ ರಾಜ್ಯದ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಹಾಗೂ ಎಲ್ಲ ಸಚಿವರು ಭಾಗವಹಿಸಲಿದ್ದು, ನಮ್ಮ ಸರ್ಕಾರ ಜನಪರ ಹಾಗೂ ಬಡವರ ಪರವಾಗಿದೆ. ರಾಜ್ಯದ ಜನತೆಗೆ ಸಮರ್ಪಿಸಲು 2 ವರ್ಷದ ಸಾಧನೆ ಕಾರ್ಯಕ್ರಮ ವೇದಿಕೆಯಾಗಲಿದೆ. ರಾಜ್ಯದ ಎಲ್ಲ ಜಿಲ್ಲೆಗಳಿಂದಲೂ ಈ ಕಾರ್ಯಕ್ರಮಕ್ಕೆ ಪ್ರತಿ ಫಲಾನುಭವಿ ಜೊತೆಗೆ ಅವರ ಕುಟುಂಬ ಸದಸ್ಯರೊಬ್ಬರು ಆಗಮಿಸುವ ರೀತಿ ವ್ಯವಸ್ಥೆ ಮಾಡಲಾಗುತ್ತಿದೆ. ಚಿತ್ರದುರ್ಗ ಜಿಲ್ಲೆಯಿಂದಲೂ ವಿವಿಧ ಫಲಾನುಭವಿಗಳನ್ನು ಕಾರ್ಯಕ್ರಮಕ್ಕೆ ಸಮರ್ಪಕವಾಗಿ ಕರೆತರುವ ರೀತಿಯಲ್ಲಿ ವ್ಯವಸ್ಥೆ ಕೈಗೊಳ್ಳಬೇಕು, ಹಾಗಾಗಿ ನೋಡಲ್ ಅಧಿಕಾರಿಗಳನ್ನು ನೇಮಿಸಿ, ಫಲಾನುಭವಿ ಹಾಗೂ ಕುಟುಂಬದ ಒರ್ವ ಸದಸ್ಯರನ್ನು ಕರೆತರುವ ಮೂಲಕ ಸವಲತ್ತು ವಿತರಣಾ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ರಾಜ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಶಿವಣ್ಣ, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ತಾಲ್ಲೂಕುಗಳ ತಹಸಿಲ್ದಾರರು ಪಾಲ್ಗೊಂಡಿದ್ದರು.

### ಕಂದಾಯ ಗ್ರಾಮಗಳ ಫಲಾನುಭವಿಗಳ ಹಕ್ಕುಪತ್ರ ನೊಂದಣಿ

ಜಿಲ್ಲೆಯಲ್ಲಿಕಂದಾಯಗ್ರಾಮಗಳಹಕ್ಕುಪತ್ರಹಾಗೂಆಸ್ತಿನೊಂದಣಿಗೆಸಂಬಂಧಿಸಿದಂತೆ ಒಟ್ಟು 6393 ಕುಟುಂಬಗಳ ದಾಖಲೆಗಳಿಗೆ ಆಯಾ ತಹಸಿಲ್ದಾರರು ಅನುಮೋದನೆ ನೀಡಿದ್ದು, 4305 ಡೀಡ್‌ಗಳಿಗೆ ತಹಸಿಲ್ದಾರರು ಸಹಿ ಮಾಡಿರುತ್ತಾರೆ. ಈವರೆಗೆ 2888 ಫಲಾನುಭವಿಗಳಿಗೆ ಕಾವೇರಿ ತಂತ್ರಾಂಶದಲ್ಲಿ ಉಪನೊಂದಣಾಧಿಕಾರಿಗಳ ಕಚೇರಿಯಲ್ಲಿ ನೋಂದಣಿ ಮಾಡಿಸಲಾಗಿದ್ದು, 2403 ಫಲಾನುಭವಿಗಳ ಇ–ಸ್ವತ್ತು ನೋಟಿಸ್ ಜನರೇಟ್ ಮಾಡಲಾಗಿದೆ. ಎಲ್ಲ ಫಲಾನುಭವಿಗಳ ಹಕ್ಕುಪತ್ರ ನೊಂದಣಿ ದಾಖಲೆ ಹಾಗೂ ಇ–ಸ್ವತ್ತು ತಯಾರಿಸುವ ಕಾರ್ಯವನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ಕಂದಾಯ ಸಚಿವರಿಗೆ ಭರವಸೆ ನೀಡಿದರು.

## ಪ್ರಮುಖ ಸುದ್ದಿ

### ಭಗವಾನ್ ಬುದ್ಧರ ಜಯಂತಿ ಆಚರಣೆ ಸಮಾರಂಭದಲ್ಲಿ ಚಿಂತಕ ಪ್ರೊ.ಸಿ.ಕೆ.ಮಹೇಶ್

# ವಿಶ್ವದಲ್ಲಿ ಬಹಳ ದಟ್ಟ ಪ್ರಭಾವ ಬೀರಿರುವ ವ್ಯಕ್ತಿ ಬುದ್ಧ

» **ಚಿತ್ರದುರ್ಗ**

ಜಗತ್ತಿನ ಎಲ್ಲಾ ತತ್ವ, ಸಿದ್ಧಾಂತಗಳ ಪ್ರಕಾರ ಇಡೀ ವಿಶ್ವದಲ್ಲಿ ಬಹಳ ದಟ್ಟವಾದ ಪ್ರಭಾವ ಬೀರಿರುವ ವ್ಯಕ್ತಿ ಬುದ್ಧ ಎಂದು ಚಿಂತಕ, ನವಯಾನ ಬುದ್ಧ ದಮ್ಮ ಸಂಘದ ಪ್ರೊ. ಸಿ.ಕೆ.ಮಹೇಶ್ ಹೇಳಿದರು.

ನಗರದ ಸ್ಟೇಡಿಯಂ ಮುಂಭಾಗದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಸೋಮವಾರ ಆಯೋಜಿಸಿದ್ದ ಭಗವಾನ್ ಬುದ್ಧರ ಜಯಂತಿ ಆಚರಣೆ ಸಮಾರಂಭದಲ್ಲಿ ಬುದ್ಧರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದ ಬಳಿಕ ಉಪನ್ಯಾಸದಲ್ಲಿ ಅವರು ಮಾತನಾಡಿದರು.



ಜಗತ್ತಿನ ಖಂಡಗಳ ಕಾಲಘಟ್ಟದಲ್ಲಿ ತುಂಬಾ ದೊಡ್ಡದಾಗಿ ಪ್ರಚಾರವಾಗಿದ್ದು ಬುದ್ಧ ದಮ್ಮ. ಇಡೀ ಜಗತ್ತಿನಲ್ಲಿ ಯಾವುದೇ ಧರ್ಮ, ತತ್ವ, ಸಿದ್ಧಾಂತಗಳಿರಬಹುದು. 2,600 ವರ್ಷಗಳ ಹಿಂದೆ ಉದಯಿಸಿದ ಬುದ್ಧನಿಂದಲೇ ಎಲ್ಲವೂ ನಡೆಯುತ್ತಿರುವುದು ಎಂದು ಅಭಿಪ್ರಾಯಪಟ್ಟರು.

ಜಗತ್ತಿನಲ್ಲಿ ಬುದ್ಧ ಪ್ರಭಾವ ಬೀರಿರುವುದಕ್ಕೆ ಸಂಬಂಧಪಟ್ಟಂತೆ ಈಗಾಗಲೇ ಸಾವಿರಾರು ಲೇಖನ, ಪುಸ್ತಕಗಳು ಬಂದಿವೆ. 2,600 ವರ್ಷಗಳಿಂದಲೂ ಬುದ್ಧನ ಬಗ್ಗೆ ಅಷ್ಟೊಂದು ದೊಡ್ಡ ಪ್ರಮಾಣದಲ್ಲಿ ಚಿಂತನೆ ನಡೆದಿದೆ ಎಂದರೆ ಆಶ್ಚರ್ಯ ಆಗುತ್ತದೆ. ಧ್ಯಾನದ ರೀತಿ, ಕಣ್ಣು ಮುಚ್ಚಿರುವ ರೀತಿಯಲ್ಲಿ, ಧರ್ಮದ ರೀತಿಯಲ್ಲಿ ಹೀಗೆ ಒಬ್ಬೊಬ್ಬರಿಗೆ ಒಂದೊಂದು ರೀತಿಯಲ್ಲಿ ಬುದ್ಧ ಕಂಡಿದ್ದಾನೆ ಎಂದು ಹೇಳಿದರು.

ಭಾರತೀಯ ಬೌದ್ಧ ಮಹಾಸಭಾ ಜಿಲ್ಲಾಧ್ಯಕ್ಷ ಬಿ.ಪಿ. ತಿಪ್ಪೇಸ್ವಾಮಿ ಮಾತನಾಡಿ, ಸಮಾನತೆ, ಸ್ವಾತಂತ್ರ್ಯ ಹಾಗೂ ವೈಜ್ಞಾನಿಕ ತಳಹದಿಯ ಮೇಲೆ ದಮ್ಮವನ್ನು ಕಟ್ಟಿದ್ದು ಬುದ್ಧ. ಇದೇ ಕಾರಣಕ್ಕೆ ಇಡೀ ವಿಶ್ವ, ಭಾರತಕ್ಕೆ ಗೌರವ ಕೊಡುತ್ತಿದೆ. ಯುದ್ಧ, ಹಿಂಸೆ ಯಾವುದೇ ಕಾರಣಕ್ಕೂ ಯಾರನ್ನೂ ಗೆಲ್ಲಿಸಲು ಸಾಧ್ಯವೇ ಇಲ್ಲ, ಪ್ರೀತಿಯೊಂದೇ ಮಾನವ ಸಂಕುಲ ಬದುಕಿಸಲು ಸಾಧ್ಯ ಎಂದು ಸಾರ್ವಕಾಲಿಕ ಸಂದೇಶ ನೀಡಿದವರು ಭಗವಾನ್ ಬುದ್ಧರು. ಪ್ರಪಂಚದಲ್ಲಿ ಅತ್ಯಂತ ಪಾಂಡಿತ್ಯ ಹೊಂದಿದ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಕೂಡ ಬುದ್ಧನೇ ನನ್ನ ಗುರು, ನನ್ನ ಬದುಕಿನ ಹಾಗೂ ಎಲ್ಲ ಮೂಲವೂ ಬುದ್ಧನೆ ಎಂದಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನ್ ಖುರೇಷಿ ಮಾತನಾಡಿ, ಎಲ್ಲರಿಗೂ ಭಗವಾನ್ ಬುದ್ಧರ ಜಯಂತಿ ಶುಭಾಶಯ ಕೋರಿದರು. ಗಂಗಾಧರ ಮತ್ತು ತಂಡದವರು ಹಾಗೂ ಕೋಟೆನಾಡು ಬುದ್ಧ ವಿಹಾರದ ಉಪಾಸಕರು ತ್ರಿಸರಣ ಮತ್ತು ಪಂಚಶೀಲ ಪಠಣ ಮಾಡಿದರು.

ಕಾರ್ಯಕ್ರಮದಲ್ಲಿ ನಗರಸಭೆ ಉಪಾಧ್ಯಕ್ಷೆ ಶ್ರೀದೇವಿ ಚಕ್ರವರ್ತಿ, ಪೌರಾಯುಕ್ತೆ ಎಂ.ರೇಣುಕ, ನವಯಾನ ಬುದ್ಧ ದಮ್ಮ ಸಂಘದ ಡಿ.ದುರ್ಗೇಶ್, ಟಿ.ರಾಮು, ಸಿ.ಎ.ಚಿಕ್ಕಣ್ಣ, ಕುಮಾರ್ ಜೆಜೆ ಹಟ್ಟಿ, ಉಪಾಸಕರಾದ ಎಚ್.ಸಿ. ನಿರಂಜನಮೂರ್ತಿ, ಬೀಸನಹಳ್ಳಿ ಜಯಪ್ಪ, ಚಂದ್ರಪ್ಪ ಬೆನಕನಹಳ್ಳಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಿ.ಎಂ.ಗುರುನಾಥ್, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್, ಸರ್ಕಾರಿ ಕಲಾ ಕಾಲೇಜಿನ ಪ್ರಾಚಾರ್ಯ ಪ್ರೊ. ಬಿ.ಟಿ. ತಿಪ್ಪೇರುದ್ರಸ್ವಾಮಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ದಲಿತ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಡಿಪ್ಲೊಮಾ ಕೃಷಿ ಕೋರ್ಸ್‌ಗೆ ಅರ್ಜಿ

» **ಚಿತ್ರದುರ್ಗ**

ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಅಧೀನದಲ್ಲಿರುವ ಬ್ರಹ್ಮಾವರದಲ್ಲಿ 2025–26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ 2 ವರ್ಷಗಳ ಡಿಪ್ಲೊಮಾ ಕೃಷಿ ಕೋರ್ಸ್‌ಗೆ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಡಿಪ್ಲೊಮಾ (ಕೃಷಿ) ಯನ್ನು ಕನ್ನಡ ಮಾಧ್ಯಮದಲ್ಲಿ ಸೆಮಿಸ್ಟರ್ (4 ಸೆಮಿಸ್ಟರ್) ಪದ್ಧತಿಯಲ್ಲಿ ಬೋಧಿಸಲಾಗುವುದು.

**ಪ್ರವೇಶ ಅರ್ಹತೆ:** ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದಲ್ಲಿ ಡಿಪ್ಲೊಮಾ (ಕೃಷಿ) ಕೋರ್ಸ್‌ಗೆ ಪ್ರವೇಶ ಕೋರುವ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡ ಪಠ್ಯವನ್ನು ಭಾಷೆಯಾಗಿ ಅಭ್ಯಸಿಸಿ ಕನಿಷ್ಠ ಶೇ. 45 ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. (ಪ.ಜಾ./ಪ.ಪಂ./ಪ್ರವರ್ಗ–1ರವರುಗಳಿಗೆ ಕನಿಷ್ಠ ಶೇ. 40 ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು) ದಿನಾಂಕ: 06–06–2025 ರಂದು ಅಭ್ಯರ್ಥಿಗಳ ವಯಸ್ಸು 19 ವರ್ಷಗಳನ್ನು ಮೀರಿರದಾರದು, ರೈತರ ಹಾಗೂ ಕೃಷಿ ಕಾರ್ಮಿಕರ ಮಕ್ಕಳಿಗೆ ಶೇ. 50 ರಷ್ಟು ಸೀಟುಗಳನ್ನು ಡಿಪ್ಲೊಮಾ (ಕೃಷಿ) ಪ್ರವೇಶಾಸಿಗೆ ಮೀಸಲಿಡಲಾಗಿದೆ. ಅಧಿಸೂಚನೆ, ಅರ್ಜಿ ಹಾಗೂ ಮಾಹಿತಿ ಪುಸ್ತಕವನ್ನು ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ವೆಬ್ ಸೈಟ್ : www.nahs.edu.in ನಲ್ಲಿ ದಿನಾಂಕ: 06–05–2025 ರಿಂದ 06–06–2025 ರವರೆಗೆ ಡೌನ್ ಲೋಡ್ ಮಾಡಬಹುದು. ಈ ರೀತಿ ವೆಬ್‌ಸೈಟ್ ಮುಖಾಂತರ ಪಡೆದು ಭರ್ತಿಮಾಡಿದ ಅರ್ಜಿಗಳನ್ನು ಮತ್ತು ಅರ್ಜಿಯ ನಿಗದಿತ ಶುಲ್ಕವನ್ನು ಡಿ.ಡಿ. ರೂಪದಲ್ಲಿ ಲಗತ್ತಿಸಿ, ದಿನಾಂಕ: 06–06–2025 ರೊಳಗೆ ಕುಲಸಚಿವರು, ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ, ಇರುವಕ್ಕೆ ಅವರಣ–577, 412/ಇಲ್ಲಿಗೆ ಕಳುಹಿಸಿಕೊಡಬೇಕು, ದಿನಾಂಕ: 06–06–2025 ರ ನಂತರ ಡಿ.ಡಿ. ಯನ್ನು ಪಡೆದು ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ಅರ್ಜಿ ಶುಲ್ಕ:** ಸಾಮಾನ್ಯ ವರ್ಗದವರಿಗೆ ರೂ. 500/–, ಪ.ಜಾ./ಪ.ಪಂ./ಪ್ರವರ್ಗ–1ರವರಿಗೆ ರೂ. 250/– ಆಗಿದ್ದು, ರಾಷ್ಟ್ರೀಕೃತ ಬ್ಯಾಂಕ್‌ಗಳ (Nationalized Bank) ಡಿ.ಡಿ.ಯನ್ನು Comptroller, KSNUAHS, Shivamogga – 577 412 ಇವರ ಹೆಸರಿನಲ್ಲಿ ಪಡೆದು ಎಲ್ಲಾ ಅಗತ್ಯ ಅಡಕಗಳೊಂದಿಗೆ ಭರ್ತಿಮಾಡಿದ ಅರ್ಜಿಗಳನ್ನು ಕುಲಸಚಿವರು, ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ, ಇರುವಕ್ಕಿ ಆವರಣ–577412 ಇಲ್ಲಿಗೆ ಜೂನ್ 06ರ ಸಂಜೆ 4 ಗಂಟೆಯೊಳಗೆ ತಲುಪುವಂತೆ ಖುದ್ದಾಗಿ ಅಥವಾ ಅಂಚೆ ಮೂಲಕ ಕಳುಹಿಸಬಹುದು. ಜೂನ್ 06ರ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಪ್ರವೇಶ ಆಯ್ಕೆ ವಿಧಾನ:** ಸರ್ಕಾರದ ಆದೇಶಗಳ ಅನ್ವಯ ಸೀಟುಗಳನ್ನು ಭರ್ತಿ ಮಾಡಲಾಗುವುದು. ಅರ್ಹ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ರೋಸ್ಟರ್ ಪದ್ಧತಿಯನ್ನು ಅಳವಡಿಸಿ, ಪ್ರವೇಶಕ್ಕೆ ಆಯ್ಕೆ ಮಾಡಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಪತ್ರ ಹಾಗೂ ವೆಬ್‌ಸೈಟ್ ಮುಖಾಂತರ ತಿಳಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

### ಕೆ. ಟಿ. ರಂಗನಾಥ ನಿಧನ

» **ಹೊಸದುರ್ಗ**



ಹೊಸದುರ್ಗ ತಾಲೂಕು ನಾಯಕ ಸಮಾಜದ ಅಧ್ಯಕ್ಷರಾಗಿದ್ದ ಕೆ. ಟಿ. ರಂಗನಾಥ (54) ಸೋಮವಾರ ಸಂಜೆ ಹೃದಯಾಘಾತದಿಂದ ನಿಧನ ಹೊಂದಿದ್ದಾರೆ. ತಾಲೂಕಿನ ಕಾಂಗ್ರೆಸ್ ಪಕ್ಷದ ಮುಖಂಡರಾಗಿದ್ದ ಮೃತರು ಚನ್ನಸಮುದ್ರ ಗ್ರಾಮದಲ್ಲಿ 4 ಬಾರಿ ಗ್ರಾಮ ಪಂಚಾಯತಿ ಸದಸ್ಯರಾಗಿದ್ದರು. ಬೋಕಿಕೆರೆ ಗ್ರಾಮಪಂಚಾಯಿತಿ ಅಧ್ಯಕ್ಷರಾಗಿ, ಉಪಾಧ್ಯಕ್ಷರಾಗಿ ಅಧಿಕಾರ ನಿರ್ವಹಿಸಿದ್ದರು. ಮೃತರ ಪತ್ನಿ ಇತ್ತೀಚೆಗಷ್ಟೆ ಕ್ಯಾನ್ಸರ್ ನಿಂದ ನಿಧನರಾಗಿದ್ದರು. ಮೃತರು ಓರ್ವ ಅಣ್ಣ, ಮಗ, ಮಗಳು, ಶಾಸಕರ ಆಪ್ತ ಕಾರ್ಯದರ್ಶಿ ರಂಗನಾಥ್ ಸೇರಿದಂತೆ ಅಪಾರ ಬಂಧು ಬಳಗದವರನ್ನು ಅಗಲಿದ್ದಾರೆ. ಮೃತರ ಅಂತ್ಯ ಸಂಸ್ಕಾರ ಮಂಗಳವಾರ ಹೊಸದುರ್ಗ ಸಮೀಪದ ಚನ್ನಸಮುದ್ರ ಗ್ರಾಮದಲ್ಲಿ ಜರುಗಲಿದೆ.

### ವೀರಭದ್ರಸ್ವಾಮಿ ಉತ್ಸವ ಮೂರ್ತಿ ಪ್ರತಿಷ್ಠಾಪನೆ

» **ಚಿತ್ರದುರ್ಗ**

ತಾಲ್ಲೂಕಿನ ಸಿದ್ದಾಪುರ ಗ್ರಾಮದಲ್ಲಿ ಶ್ರೀ ಭದ್ರಕಾಳಮ್ಮ ಸಮೇತ ಶ್ರೀ ವೀರಭದ್ರಸ್ವಾಮಿ ದೇವಸ್ಥಾನದ ನೂತನ ಉತ್ಸವ ಮೂರ್ತಿ ಪ್ರತಿಷ್ಠಾಪನೆ ಲೋಕಾರ್ಪಣೆ ಸಮಾರಂಭವೂ ಮೇ. 13 ಮತ್ತು 14 ರಂದು ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ವೀರಭದ್ರೇಶ್ವರ ಭಕ್ತ ಮಂಡಳಿ ತಿಳಿಸಿದೆ. ಲೋಕ ಕಲ್ಯಾಣಾರ್ಥವಾಗಿ ಮೇ. 13ನೇ ಮಂಗಳವಾರ ಸಂಜೆ 7.00 ರಿಂದ ಗೋದೂಳಿ ಲಗ್ನದಲ್ಲಿ ಗಂಗಾ ಪೂಜೆ, ಗೋ ಪೂಜೆ, ದೀಪ ಪೂಜೆ, ಗಣಪತಿ ಸ್ವಸ್ತಿ ಪುಣ್ಯಾಹ ವಾಚನ ಹಾಗೂ ವಿಗ್ರಹ ಸಂಸ್ಕಾರ ಪೂಜಾ ಕಾರ್ಯಕ್ರಮ ನಡೆಯಲಿದೆ. ಮೇ. 14ನೇ ಬುಧವಾರ ಬೆಳಿಗ್ಗೆ 6.00 ರಿಂದ ಬ್ರಾಹ್ಮಿ ಮುಹೂರ್ತದಲ್ಲಿ ಕಲಶ ಸ್ಥಾಪನೆ, ಉತ್ಸವಮೂರ್ತಿಗೆ ಪ್ರಾಣ ಪತ್ರಿಷ್ಠೆ, ರುದ್ರಾಭಿಷೇಕ, ಗಣ ಹೋಮ ಪೂರ್ಣಾಹುತಿ ನಂತರ ಮಹಾಮಂಗಳಾರತಿ ಪ್ರಸಾದ ವಿನಿಯೋಗ ಕಾರ್ಯಕ್ರಮ ನಡೆಯಲಿದೆ.

---

**ಕಟ್ಟಡ ನಿರ್ಮಾಣ ಕಾಮಗಾರಿ ಪರಿಶೀಲಿಸಿದ ಕಂದಾಯ ಸಚಿವ ಕೃಷ್ಣಭೈರೇಗೌಡ**

# ನೂತನ ಡಿಸಿ ಕಚೇರಿ ಸಂಕೀರ್ಣ ಶೀಘ್ರ ಪೂರ್ಣ

» **ಚಿತ್ರದುರ್ಗ**

ಚಿತ್ರದುರ್ಗ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣ ಕಟ್ಟಡವನ್ನು ಆರು ತಿಂಗಳೊಳಗೆ ಶೀಘ್ರವಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ಹೇಳಿದರು.

ಇಲ್ಲಿನ ರಾಷ್ಟ್ರೀಯ ಹೆದ್ದಾರಿ–4 ರ ಕುಂಚಿಗನಾಳ್ ಕಣಿವೆಯ ಸಮೀಪ ನಿರ್ಮಿಸಲಾಗುತ್ತಿರುವ ನೂತನ ಜಿಲ್ಲಾಡಳಿತ ಭವನದ ಕಟ್ಟಡ ನಿರ್ಮಾಣ ಸ್ಥಳಕ್ಕೆ ಸೋಮವಾರ ಭೇಟಿ ನೀಡಿ ಪರಿಶೀಲಿಸಿದ ಅವರು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದರು.





ಚಿತ್ರದುರ್ಗದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣದ ಕೆಲಸ ಆಮೆಗತಿಯಲ್ಲಿ ಸಾಗಿದ್ದು, ಕಟ್ಟಡ ನಿರ್ಮಾಣ ಕಾಮಗಾರಿ ನಡೆಯುತ್ತಿದೆ. ರೂ.25 ಕೋಟಿ ವೆಚ್ಚದಲ್ಲಿ ಕಟ್ಟಡ ನಿರ್ಮಾಣಕ್ಕೆ ಈ ಹಿಂದೆ ಯೋಜನೆ ರೂಪಿಸಲಾಗಿತ್ತು. ಆದರೆ ಕಟ್ಟಡಕ್ಕೆ ಈಗಾಗಲೇ ರೂ.47 ಕೋಟಿ ವೆಚ್ಚವಾಗಿದೆ. ಇದರ ಜೊತೆಗೆ ಇನ್ನೂ ರೂ.15 ಕೋಟಿ ಹೆಚ್ಚುವರಿ ಅನುದಾನ ಬೇಡಿಕೆಯ ಪರಿಸ್ಥಿತಿ ಇದೆ. ಇತ್ತೀಚೆಗೆ ಜಿಲ್ಲಾ ಉಸ್ತುವಾರಿ ಸಚಿವರು ಕಟ್ಟಡ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿ, ಕಟ್ಟಡದಲ್ಲಿನ ಕೆಲವು ಲೋಪದೋಷಗಳನ್ನು ಉಲ್ಲೇಖಿಸಿ, ಕಂದಾಯ ಸಚಿವರು ಭೇಟಿ ನೀಡಿ ಪರಿಶೀಲಿಸಬೇಕು ಎಂದು ಪತ್ರ ಬರೆದು ಮನವಿ ಮಾಡಿದ್ದರು. ಅದರಂತೆ ಇಂದು ಕಟ್ಟಡ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದೇನೆ. ಜಿಲ್ಲಾ ಉಸ್ತುವಾರಿ ಸಚಿವರ ಒತ್ತಾಯಕ್ಕೆ ಅನುಗುಣವಾಗಿ ಕಟ್ಟಡ ಕಾಮಗಾರಿ ಶೀಘ್ರ ಪೂರ್ಣಗೊಳಿಸಲು ನಾವು ಬದ್ಧರಾಗಿದ್ದೇವೆ ಎಂದು ತಿಳಿಸಿದರು.

ನೂತನ ಜಿಲ್ಲಾಧಿಕಾರಿಗಳ ಕಚೇರಿ ಚಿತ್ರದುರ್ಗ ನಗರದಿಂದ ತುಂಬಾ ದೂರ ಹಾಗೂ ಗುಡ್ಡದಲ್ಲಿ ಇದ್ದು, ಇಂತಹ ಪ್ರದೇಶದಲ್ಲಿ ಕಟ್ಟಡ ನಿರ್ಮಾಣಕ್ಕೆ ಸ್ಥಳ ಆಯ್ಕೆ ಮಾಡಿಕೊಳ್ಳಲಾಗಿದೆ. ಇದರ ಜೊತೆಗೆ ಈ ಭಾಗದಲ್ಲಿ ನೀರಿನ ಸೌಲಭ್ಯವೂ ಸಹ ಬಹಳ ಕಡಿಮೆ, ಕಟ್ಟಡ ನಿರ್ಮಾಣದ ಯೋಜನೆ ರೂಪಿಸುವಾಗ ರೂ.25 ಕೋಟಿಗೆ ಯೋಜನೆ ರೂಪಿಸಲಾಗಿತ್ತು, ಬಳಿಕ 47 ಕೋಟಿ ರೂ. ಅಂದಾಜಿಗೆ ಅನುಮೋದನೆ ಪಡೆಯಲಾಗಿದೆ. ಕಟ್ಟಡ ಸ್ಥಳದ ಗುಡ್ಡ ನೆಲಸಮ ಮಾಡಲಿಕ್ಕಾಗಿಯೇ ರೂ.10 ಕೋಟಿಗೂ ಹೆಚ್ಚು ಹಣ ವ್ಯಯಿಸಲಾಗಿದೆ.

ಸರಿಯಾದ ರೀತಿಯಲ್ಲಿ ಯೋಜನೆ ರೂಪಿಸದೇ, ಅಸಮರ್ಪಕವಾದ ಅಂದಾಜು ಮಾಡಿ, ಕಟ್ಟಡ ನಿರ್ಮಾಣ ಮಾಡಲಾಗುತ್ತಿದೆ ಎಂದು ಸಚಿವ ಕೃಷ್ಣ ಭೈರೇಗೌಡ ಅವರು ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲೆಯಜನರಬೇಡಿಕೆಗೆಸ್ಪಂದಿಸಬೇಕಿದ್ದು, ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳ ನೂತನ ಕಚೇರಿ ಸಂಕೀರ್ಣವನ್ನು ಶೀಘ್ರವಾಗಿ ಪೂರ್ಣಗೊಳಿಸಿ, ಆದಷ್ಟು ಕಾರ್ಯಾರಂಭ ಮಾಡಲು ಕ್ರಮ ವಹಿಸಲಾಗುವುದು ಎಂದು ಸಚಿವರು ಹೇಳಿದರು.

ಇದಕ್ಕೂಮುನ್ನ,ಕಟ್ಟಡಕಾಮಗಾರಿಯನ್ನು ಗುಣಮಟ್ಟದಲ್ಲಿ ಕೈಗೊಳ್ಳಬೇಕು, ಕಟ್ಟಡದಲ್ಲಿ ವಿವಿಧ ಇಲಾಖೆಗಳಿಗೆ, ಸಾರ್ವಜನಿಕರಿಗೆ ಅಗತ್ಯ ಇರುವ ಎಲ್ಲ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಯೋಜಿತ ರೀತಿಯಲ್ಲಿಯೇ ಕಾಮಗಾರಿ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಸೇರಿದಂತೆ ಮತ್ತಿತರರು ಇದ್ದರು.

---

# ಬುದ್ಧ, ಬಸವ, ಅಂಬೇಡ್ಕರ್ ತ್ರಿವಳಿ ರತ್ನತ್ರಯರ ಆದರ್ಶ ಪಾಲಿಸಿ; ಶಾಸಕ ಕೆ.ಎಸ್.ಬಸವಂತಪ್ಪ

» **ದಾವಣಗೆರೆ**

ಗೌತಮಬುದ್ಧ, ಬಸವಣ್ಣ, ಡಾ.ಬಿ.ಆರ್. ಅಂಬೇಡ್ಕರ್ ಈ ಮೂರು ರತ್ನತ್ರಯರ ಆದರ್ಶಗಳನ್ನು ಪಾಲಿಸಿದಾಗ ಜೀವನದ ಮೌಲ್ಯ ಹೆಚ್ಚುತ್ತದೆ ಎಂದು ಮಾಯಕೊಂಡ ಶಾಸಕರಾದ ಕೆ.ಎಸ್. ಬಸವಂತಪ್ಪ ಹೇಳಿದರು.

ಸೋಮವಾರ(ಮೇ.12) ರಂದು ನಗರದ ಶ್ರೀರಾಮ ನಗರದಲ್ಲಿರುವ ಗಾಂಧಿಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಭಗವಾನ್ ಬುದ್ಧರ ಜಯಂತಿ ಕಾರ್ಯಕ್ರಮದಲ್ಲಿ ಬುದ್ಧನ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಮಾತನಾಡಿದರು. ಗೌತಮ ಬುದ್ಧರ ಜಯಂತಿಯನ್ನು ಸರ್ಕಾರದಿಂದ ಇದೇ ಪ್ರಥಮವಾಗಿ ಆಚರಣೆ ಮಾಡಲು ಅವಕಾಶ ಮಾಡಿಕೊಟ್ಟ ಸರ್ಕಾರಕ್ಕೆ ಅಭಿನಂದಿಸುತೇನೆ. ಬುದ್ಧನ ತತ್ವಾದರ್ಶಗಳಾದ ಆಸೆಯೇ ದುಃಖಕ್ಕೆ ಮೂಲ, ಅದನ್ನು ಇನ್ನೊಂದು ರೀತಿಯಲ್ಲಿ ಹೇಳುವುದಾದರೇ ದುರಾಸೆಯೇ ದುಃಖಕ್ಕೆ ಮೂಲ ಎಂದು ಹೇಳಬೇಕು. ಬೌದ್ಧ ಧರ್ಮದ ಸಂಸ್ಥಾಪಕ ಗೌತಮ ಬುದ್ಧ ಮಹಾನ್ ದಾರ್ಶನಿಕ. ಇವರು ರಾಜವಂಶದ ಕುಡಿ ಸಕಲ ವೈಭೋಗವನ್ನು ತ್ಯಜಿಸಿ, ಜ್ಞಾನೋದಯ ಪಡೆದು ಗೌತಮ ಬುದ್ಧನಾಗುತ್ತಾನೆ, ಲೋಕಕ್ಕೆ ಶಾಂತಿ, ಅಹಿಂಸೆಯ ಮಹತ್ವವನ್ನು ತಿಳಿಸಿದರು. ಬುದ್ಧನ ಜನನ, ಮರಣ ಹಾಗೂ ಜ್ಞಾನೋದಯವನ್ನು ಸ್ಮರಿಸುವ ಉದ್ದೇಶದಿಂದ ಸರ್ಕಾರದಿಂದ ಈ ಆಚರಣೆಯನ್ನು ಮಾಡಲಾಗುತ್ತಿದೆ. ಬೌದ್ಧಧರ್ಮದ ಮೂರು ಪ್ರಮುಖ ತತ್ವಗಳಾದ ಜ್ಞಾನೋದಯ, ಕರುಣೆ ಮತ್ತು ಶಾಂತಿಯನ್ನು ಪರಿಗಣಿಸಲು ಇದು ಒಂದು ದಿನ. ಈ ಐತಿಹಾಸಿಕ ಸಂದರ್ಭವು ಶಾಂತಿ ಮತ್ತು ಸಾಮರಸ್ಯವನ್ನು ಕಾಪಾಡುವ ಬುದ್ಧ ತತ್ವಗಳನ್ನು ಸ್ಮರಿಸುತ್ತದೆ ಎಂದರು.



ನಿವೃತ್ತ ಪ್ರಾಧ್ಯಾಪಕರಾದ ಗೋವಿಂದಪ್ಪ ಉಪನ್ಯಾಸ ನೀಡಿ ಉತ್ತರ ಭಾರತದಲ್ಲಿ, ಭಗವಾನ್ ಬುದ್ಧನು ಶ್ರೀಕೃಷ್ಣನ ಒಂಬತ್ತನೇ ಅವತಾರ ಮತ್ತು ವಿಷ್ಣುವಿನ ಎಂಟನೇ ಅವತಾರ ಎಂದು ಕೆಲವರು ನಂಬುತ್ತಾರೆ. ಬುದ್ಧನು ಹೋರಾಟಗಳನ್ನು ಕೊನೆಗೊಳಿಸುವ ಮಾರ್ಗಗಳನ್ನು ಕಂಡುಹಿಡಿದಿದ್ದ, ಬಿಹಾರದ ಬೋಧಗಯಾದಲ್ಲಿ ಮಹಾಬೋಧಿಮರದ ಕೆಳಗೆ 49 ದಿನಗಳ ಧ್ಯಾನದ ನಂತರ ಜ್ಞಾನೋದಯವಾಯಿತು ಎಂದರು.

ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಸಂಚಾಲಕರಾದ ಎ.ವಿ.ರಾಮಚಂದ್ರಪ್ಪ, ಡಿಎಸ್‌ಎಸ್ ಮುಖಂಡರಾದ ಮಲ್ಲೇಶ್, ಉಪವಿಭಾಗಾಧಿಕಾರಿ ಸಂತೋಷ್ ಪಾಟೀಲ್, ನಿವೃತ್ತ ಪೊಲೀಸ್ ಅಧಿಕಾರಿ ರುದ್ರಮುನಿ ಹಾಗೂ ರವಿನಾರಾಯಣ, ಆವರಗೆರೆ ರುದ್ರಮುನಿ ಉಪಸ್ಥಿತರಿದ್ದರು.

### ಡೆಂಗಿ ನಿಯಂತ್ರಣ ಕುರಿತು ಪೌರಕಾರ್ಮಿಕರಿಗೆ ತರಬೇತಿ



» **ಚಿತ್ರದುರ್ಗ**

ಚಿತ್ರದುರ್ಗ ನಗರದ ಅಂಬೇಡ್ಕರ್ ಕಲ್ಯಾಣ ಮಂಟಪದಲ್ಲಿ ಸೋಮವಾರ ಸಾಂಕ್ರಾಮಿಕ ರೋಗಗಳಾದ ಡೆಂಗ್ಯೂ, ಚಿಕನ್ ಗುನ್ಯಾ ಹರಡದಂತೆ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸುವ ಕುರಿತು ಪೌರಕಾರ್ಮಿಕರಿಗೆ ಜಾಗೃತಿ ಕಾರ್ಯಗಾರ ನಡೆಯಿತು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಚೇರಿ ಹಾಗೂ ನಗರಸಭೆ ವತಿಯಿಂದ ಹಮ್ಮಿಕೊಂಡಿದ್ದ ಕಾರ್ಯಾಗಾರವನ್ನು ಡೆಂಗ್ಯೂ ಭಿತ್ತಿ ಪತ್ರ ಅನಾವರಣಗೊಳಿಸುವ ಮೂಲಕ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಚೇರಿಯ ಜಿಲ್ಲಾ ಆರೋಗ್ಯ ಮೇಲ್ವಿಚಾರಕ ಸುರೇಶ್ ಬಾಬು ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಚೇರಿಯ ಜಿಲ್ಲಾ ಆರೋಗ್ಯ ಮೇಲ್ವಿಚಾರಕ ಸುರೇಶ್ ಬಾಬು, ಪ್ರಸ್ತುತ ಮಳೆಗಾಲ ಪ್ರಾರಂಭವಾಗುತ್ತಿದ್ದು, ಘನ ತ್ಯಾಜ್ಯಗಳಾದ ಎಳನೀರು ಚಿಪ್ಪು, ಒಡೆದ ಪ್ಲಾಸ್ಟಿಕ್ ಬಾಟಲ್, ಪಿಂಗಾಣಿ ವಸ್ತುಗಳಲ್ಲಿ ಮಳೆ ನೀರು ನಿಂತು ಲಾರ್ವಾ ಸೊಳ್ಳೆ ಉತ್ಪತ್ತಿಯಾಗಿ ಹಗಲು ಹೊತ್ತಿನಲ್ಲಿ ಸೊಳ್ಳೆಗಳು ಕಡಿಯುವುದರಿಂದ ಡೆಂಗಿ, ಚಿಕನ್ ಗುನ್ಯಾ ಹೆಚ್ಚಾಗುವ ಸಂಭವವಿದ್ದು, ಇದರ ನಿಯಂತ್ರಣಕ್ಕಾಗಿ ಪೌರಕಾರ್ಮಿಕರು ಖಾಲಿ ನಿವೇಶನ ಹೊರಗಿನ ಸ್ಥಳಗಳಲ್ಲಿ ಬಿಸಾಡಿರುವ ಈ ವಸ್ತುಗಳನ್ನು ಸೂಕ್ತ ವಿಲೇವಾರಿ ಮಾಡುವಂತೆ ಕರೆ ನೀಡಿದರು.

ನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಯಶಸ್ ಮಾತನಾಡಿ, ಸಾರ್ವಜನಿಕರು ಮನೆಗಳಲ್ಲಿ ಬಳಸಲು ಡ್ರಮ್, ಸಿಮೆಂಟ್ ತೊಟ್ಟಿ, ಬ್ಯಾರೆಲ್‌ಗಳಲ್ಲಿ ನೀರನ್ನು ಸಂಗ್ರಹಿಸುವುದರಿಂದ ಅವುಗಳಲ್ಲಿ ಡೆಂಗ್ಯೂ, ಚಿಕನ್ ಗುನ್ಯಾ, ಸೊಳ್ಳೆ ಮರಿಗಳು ಉತ್ಪತ್ತಿಯಾಗಿ ನಮಗೆ ಹಗಲು ಹೊತ್ತಿನಲ್ಲಿ ಕಡಿಯುವುದರಿಂದ ಇದರ ತೀವ್ರತೆ ಹೆಚ್ಚಾಗುತ್ತದೆ. ಪ್ರಯುಕ್ತ ನೀರನ್ನು ಶೇಖರಿಸಿರುವ ತಾಣಗಳನ್ನು ಸೂಕ್ತ ರೀತಿಯಲ್ಲಿ ಮುಚ್ಚಿಟ್ಟು ಬಳಸುವಂತೆ ತಿಳಿಸಿದರು.

---

**ಪ್ರಮುಖ ಸುದ್ದಿ**

# ಬಸವಣ್ಣ ವಚನ ಅರ್ಥ ಮಾಡಿಕೊಂಡರೆ ಜೀವನವೇ ಸಾರ್ಥಕ

» **ಹೊಳಲ್ಕೆರೆ/ಚಿತ್ರದುರ್ಗ**

ಆಚಾರವೇ ಸ್ವರ್ಗ, ಅನಾಚಾರವೇ ನರಕ .ಇದರಲ್ಲಿ ಎಂತಹ ಮಹತ್ವದ ಅರ್ಥ ಇದೆ ಎಂದರೆ ಮನುಷ್ಯರೆಲ್ಲರೂ ಸಹ ಬಸವಣ್ಣನವರ ಈ ಒಂದು ವಚನದ ಸಾಲನ್ನು ಅರ್ಥ ಮಾಡಿಕೊಂಡರೆ ಸಾಕು ಇಡೀ ಜೀವನವೇ ಸಾರ್ಥಕವಾಗುತ್ತದೆ. ಅದರಂತೆ ನಾವು ಮನುಷ್ಯರು ಲೋಕಾನುಭವದ ಜೊತೆಗೆ ಶಿವಾನುಭವವನ್ನು ಕೇಳುವುದರ ಮುಖೇನ ನಮ್ಮ ಬದುಕನ್ನು ಸಾಗಿಸುತ್ತಾ ಹೋದರೆ ಬದುಕು ಹಸನಾಗುವುದರಲ್ಲಿ ಸಂಶಯೇ ಇಲ್ಲ ಎಂದು ರಾವಂದೂರು ಮುರಘಾಮಠದ ಮೋಕ್ಷಪತಿ ಮಹಾಸ್ವಾಮಿಗಳು ಕರೆ ನೀಡಿದರು.

ಶ್ರೀಗಳವರು ತಾಲೂಕಿನ ಈಚಘಟ್ಟ ಗ್ರಾಮದಲ್ಲಿ ಎರಡು ದಿನಗಳ ಬಸವ ಜಯಂತಿ ಸಮಾರಂಭದ ಎರಡನೇ ದಿನವಾದ ಇಂದು ಗ್ರಾಮದ ವೀರಭದ್ರಸ್ವಾಮಿ ದೇವಸ್ಥಾನದ ಆವರಣದಲ್ಲಿ ಏರ್ಪಡಿಸಿದ್ದ ಬಸವ ಜಯಂತಿ ಕಾರ್ಯಕ್ರಮವನ್ನು ಬಸವೇಶ್ವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಉದ್ಘಾಟನೆಯನ್ನು ಮಾಡಿ ಮಾತನಾಡುತ್ತಾ ನಾವು ಆಚಾರ ವಿಚಾರದಲ್ಲಿ ಎಲ್ಲಿಯೂ ಎಡವದೇ ನಡೆದರೆ ಅದು ನಾವು ಬಸವಣ್ಣನವರಿಗೆ ಸಲ್ಲಿಸುವ ನಿಜವಾದ ಪೂಜೆ ಅಥವಾ ತತ್ವವೆಂದೇ ತಿಳಿಯಬೇಕು. ನಾವು ಬದುಕಲಿಕ್ಕೆ ಗಾಳಿ ನೀರು ಬೆಳಕು ಈ ಪಂಚಭೂತಗಳ ಎಷ್ಟು ಅವಶ್ಯಕತೆ ಇದೆ. ಆದರೆ ನಾವು ಇಂದು ಅವುಗಳನ್ನು ಕಲುಷಿತಗೊಳಿಸುತ್ತಿದ್ದೇವೆ ಎಂದು ವಿಷಾದ ವ್ಯಕ್ತಪಡಿಸಿ ಮಕ್ಕಳಿಗೆ ಚಿಕ್ಕ ವಯಸ್ಸಿನಲ್ಲಿ ಸಂಸ್ಕಾರಯುತ ಶಿಕ್ಷಣವನ್ನು ನೀಡುವುದರ ಮುಖಾಂತರ ಲೋಕಜ್ಞಾನದ ಜೊತೆಗೆ ಶಿವಾನುಭವವನ್ನು ಕಲಿಸುವ ಮೂಲಕ ಇಂತಹ ಧಾರ್ಮಿಕತೆಯ ಕಾರ್ಯಕ್ರಮಗಳು ಆಗಾಗ ಗ್ರಾಮಗಳಲ್ಲಿ ನಡೆದರೆ ಸದ್ವಿಚಾರಗಳ ಮನವರಿಕೆಯಿಂದ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ ಎಂದರು. ಸಮ್ಮುಖ ವಹಿಸಿದ್ದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಆಡಳಿತ ಮಂಡಳಿಯ ಸದಸ್ಯರಾದ ಡಾ. ಬಸವಕುಮಾರ ಮಹಾಸ್ವಾಮಿಗಳು ಮಾತನಾಡಿ ನಮ್ಮ ನಡೆ ನುಡಿ ಆಚಾರ ವಿಚಾರಗಳಲ್ಲಿ ಕುಹಕ ಆಡಂಬರ, ವ್ಯಂಗ್ಯಗಳಿಲ್ಲದ ಸಹಜ ಸ್ವಬಾವದ ಮೂಲಕ ನಮ್ಮ ಬದುಕನ್ನು ಸಾಗಿಸಬೇಕಿದೆ. ನಮ್ಮ ನಾಡಿನ ಶ್ರೇಷ್ಠ ಚಿಂತಕರಾದ ಆಚಾರ್ಯ ವಿನೋಬಾ ಭಾವೆಯವರು ಬಸವಣ್ಣನವರ ಕುರಿತು ಜಗತ್ತಿನ ಯಾವುದೇ ತತ್ವಜ್ಞಾನಿ ಕಾಯಕವೇ ಕೈಲಾಸ ಎಂಬ ತತ್ವವನ್ನು ನೀಡಿಲ್ಲ .ಆದರೆ ಬಸವಣ್ಣನವರು ಅಂತಹ ಉದಾತ್ತ ತತ್ವವನ್ನು ನೀಡಿ ಜಗತ್ತಿಗೆ ಮಾರ್ಗದರ್ಶಕರಾಗಿದ್ದಾರೆ ಎಂಬುದನ್ನ ಉದಾಹರಿಸಿದರು. ಬಸವಣ್ಣನವರ ಜಯಂತಿಯನ್ನು ಈ ಗ್ರಾಮದಲ್ಲಿ ಎಲ್ಲ ರೀತಿಯಿಂದ ಅರ್ಥಪೂರ್ಣ, ವೈಶಿಷ್ಟ ಪೂರ್ಣವಾಗಿ ಹಬ್ಬದ ರೀತಿಯಲ್ಲಿ ಆಚರಿಸಿರುವುದು, ಇದು ಬೇರೆ ಗ್ರಾಮಗಳಿಗೆ ಮಾದರಿಯಾಗಿದೆ ಎಂದು ಹರ್ಷ ವ್ಯಕ್ತಪಡಿಸಿ ಶಾಂತಿ, ಸಹಕಾರ, ಕರುಣೆ ವಿನಯದಿಂದ ಪರಸ್ಪರ ಎಲ್ಲರೂ ಒಗ್ಗೂಡಿ ಬದುಕುವುದೇ ಬಸವ ತತ್ವದ ತಿರುಳು ಎಂದು ಪ್ರತಿಪಾದಿಸಿದರು.



ಸಮ್ಮುಖ ವಹಿಸಿದ್ದ ದಾವಣಗೆರೆ ವಿರಕ್ತಮಠದ ಡಾಕ್ಟರ್ ಬಸವಪ್ರಭು ಮಹಾಸ್ವಾಮಿಗಳು ಮಾತನಾಡಿ ಯಾರು ಬದ್ಧತೆಯನ್ನು ರೂಢಿಸಿಕೊಂಡಿರುತ್ತಾರೋ, ಅವರು ಸಹಜವಾಗಿ ಸಂಸ್ಕಾರಯುತ ಬದುಕು ಅವರದಾಗಿರುತ್ತದೆ. ವಿಶ್ವದಲ್ಲಿ ಶಾಂತಿ ಬರಬೇಕಾದರೆ ಅದು ಬಸವ ತತ್ವದ ಆಚರಣೆಯಿಂದ ಮಾತ್ರ ಸಾಧ್ಯವೆಂದು ಪ್ರತಿಪಾದಿಸಿದರು.

ಮಾಜಿ ಶಾಸಕರಾದ ಪಿ. ರಮೇಶ್ ಮಾತನಾಡಿ ಮನುಷ್ಯ ದುರ್ಗುಣಗಳನ್ನು ತ್ಯಜಿಸಿದರೆ ಶರಣಾಗುತಾನೆ. ಅಂತಹ ಶರಣಾಗುವ ಬಗೆ ಬಸವೇಶ್ವರರ ತತ್ವದಲ್ಲಿದೆ. ಗ್ರಾಮೀಣ ಭಾಗದ ಜನರು ತಮ್ಮ ದುಡಿಮೆಯ ಜೊತೆಜೊತೆಗೆ ಇಂತಹ ತತ್ವದ ವಿಚಾರಗಳನ್ನು ಮನನ ಮಾಡಿಕೊಂಡರೆ ಸ್ವರ್ಗವನ್ನೇ ದರೆಗಿಳಿಸಬಹುದು ಅದನ್ನೇ ಬಸವಾದಿ ಶಿವಶರಣರು ಕಾಯಕ ತತ್ವ ಬೋಧಿಸಿದ್ದಾರೆ. ಅದರಲ್ಲಿ ಎಲ್ಲವು ಅಡಗಿದೆ ಎಂದರು.

ರೈತ ಸಂಘದ ರಾಜ್ಯ ಕಾರ್ಯದರ್ಶಿ ಈಚ್ಘಟ್ಟದ ಸಿದ್ಧವೀರಪ್ಪ ಮಾತನಾಡಿ ಕೇವಲ ಶರಣರ ,ದಾರ್ಶನಿಕರ ಹೆಸರನ್ನ ಶೋಕಿಗಾಗಿ, ಆಡಂಬರಕ್ಕಾಗಿ ,ಭಾಷಣಕ್ಕಾಗಿ ಸೀಮಿತಗೊಳಿಸಿದೆ ನಮ್ಮ ವೈಯಕ್ತಿಕ ಬದುಕಿನಲ್ಲಿ ಅಳವಡಿಸಿಕೊಂಡಾಗ ಮಾತ್ರ ತತ್ವ ಪ್ರಬುದ್ಧಮಾನಕ್ಕೆ ಬರಲು ಸಾಧ್ಯವಾಗುತ್ತದೆ ಎಂದು ನುಡಿದರು. ಸುಂದರವಾದ ಕಾರ್ಯಕ್ರಮ ಮಾಡಿರುವ ನಾವು ವಚನಗಳನ್ನು ನಮ್ಮ ಜೀವನದ ಅಂಗವಾಗಿ ತೆಗೆದುಕೊಂಡಾಗ ಜೀವನ ಸಮೃದ್ಧವಾಗಿ ಇರಲು ಸಾಧ್ಯ ಎಂದರು.

ವಿಧಾನ ಪರಿಷತ್ ಸದಸ್ಯರ ಕೆ ಎಸ್ .ನವೀನ್ ಮಾತಾಡಿ ಬಸವಣ್ಣನವರ ಜಯಂತಿಯನ್ನು ಎಲ್ಲ ವರ್ಗದವರು ಸೇರಿಕೊಂಡು ಮಾಡಿದರೆ ಅದಕ್ಕೆ ನಿಜವಾದ ನಿಜವಾದ ಅರ್ಥ ಬರುತ್ತದೆ. ವಿಶ್ವಕ್ಕೆ ಪ್ರಜಾಪ್ರಭುತ್ವ ತತ್ವವನ್ನು ಪಸರಿಸಿದ ಕೀರ್ತಿ ಬಸವಣ್ಣನವರಿಗೆ ಸಲ್ಲಿಸುತ್ತದೆ. ಹಾಗಾಗಿ ನಾವು ಕೇವಲ ಔಪಚಾರಿಕವಾಗಿ ಇಂತಹ ಕಾರ್ಯಕ್ರಮಗಳನ್ನು ಮಾಡದೆ ಜನಸಂಘಟನೆಗಾಗಿ ನಮ್ಮ ಜೀವನದ ಏಳಿಗೆಗಾಗಿ ನೈತಿಕವಾಗಿ ಬದುಕಲು ವಚನ ತತ್ವ ಅಗತ್ಯವಾಗಿದೆ. ಹಳ್ಳಿಗಳು ಸುಭಿಕ್ಷವಾಗಿರಲಿ ಅದು ಬಸವಣ್ಣನವರ ಆಶಯದಂತೆ ನಡೆಯಲಿ ಎಂದರು.

**ಫಾಸ್ಟ್ ನ್ಯೂಸ್**

## ಮೇ14 ರಂದು ನಿಜಲಿಂಗಪ್ಪ ಸಂಸ್ಥೆಯ ಶಾಲಾ ಕಾಲೇಜುಗಳ ನೂತನ ಕಟ್ಟಡಗಳ ಉದ್ಘಾಟನೆ

» **ಹೊಸದುರ್ಗ**

ಮೇ 14 ರಂದು ಬುಧವಾರ ಎಸ್.ನಿಜಲಿಂಗಪ್ಪ ಸಂಸ್ಥೆಯ ಶಾಲಾ ಕಾಲೇಜುಗಳ ನೂತನ ಕಟ್ಟಡಗಳ ಉದ್ಘಾಟನೆ ನಡೆಯಲಿದೆ ಎಂದು ಎಸ್.ಎನ್.ಇ.ಆರ್.ಡಿ ಟ್ರಸ್ಟ್ ಕಾರ್ಯದರ್ಶಿ ಕೆ.ಎಸ್. ಕಲ್ಮಠ್ ತಿಳಿಸಿದರು. ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಎಸ್. ನಿಜಲಿಂಗಪ್ಪ ಶೈಕ್ಷಣಿಕ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆ ವತಿಯಿಂದ ನೂತನ ಕಟ್ಟಡಗಳ ಲೋಕಾರ್ಪಣೆ ಪಟ್ಟಣದ ಎಸ್. ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ನಡೆಯಲಿದ್ದು ಅಂದು ಬೆಳಿಗ್ಗೆ 8 ಗಂಟೆಯಿಂದ ಇಷ್ಟಲಿಂಗ ಪೂಜೆ ನಡೆಯಲಿದೆ. ಬಾಳೆಹೊನ್ನೂರು ಮಠದ ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಸ್ವಾಮೀಜಿ, ನೊಣವಿನಕೆರೆ ಕಾಡಸಿದ್ದೇಶ್ವರ ಮಠದ ಕರಿವೃಷಭ ರಾಜದೇಶಿಕೇಂದ್ರ ಶಿವಯೋಗೀಶ್ವರ ಸ್ವಾಮೀಜಿ, ಹುಣಸಘಟ್ಟ ಗುರುಮೂರ್ತಿ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಎಸ್.ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಯ ನೂತನ ಪದವಿ ಪೂರ್ವ ಕಾಲೇಜು ಕಟ್ಟಡದ ಲೋಕಾರ್ಪಣೆಯನ್ನು ಶಾಸಕ ಬಿ.ಜಿ. ಗೋವಿಂದಪ್ಪ ನೇರವೇರಿಸುವರು. ಎಂ.ಪಿ. ಪ್ರಕಾಶ್ ಪ್ರೌಢಶಾಲಾ ವಿಭಾಗದ ನೂತನ ಕಟ್ಟಡದ ಉದ್ಘಾಟನೆಯನ್ನು ಶಾಸಕರುಗಳಾದ ಲತಾ ಮಲ್ಲಿಕಾರ್ಜುನ್, ವಿಜಯಾನಂದ ಎಸ್ ಕಾಶಪ್ಪ ಉದ್ಘಾಟಿಸುವರು. ಸಂಸದ ಗೋವಿಂದ ಎಂ ಕಾರಜೋಳ ಕಾರ್ಯಕ್ರಮ ಉದ್ಘಾಟಿಸುವರು. ಎಸ್.ಎನ್.ಇ.ಆರ್.ಡಿ ಟ್ರಸ್ಟ್ ಅಧ್ಯಕ್ಷ ಎಂ. ಶಿವಲಿಂಗಪ್ಪ ಅಧ್ಯಕ್ಷತೆ ವಹಿಸುವರು. ನಿರ್ದೇಶಕ ಎಂ.ಬಿ. ತಿಪ್ಪೇಸ್ವಾಮಿ, ಕಾರ್ಯದರ್ಶಿ ಕೆ.ಎಸ್. ಕಲ್ಮಠ್, ಜನಪ್ರತಿನಿಧಿಗಳು, ಮುಖಂಡರುಗಳು ಸೇರಿದಂತೆ ಹಲವರು ಭಾಗವಹಿಸುವರು ಎಂದು ಮಾಹಿತಿ ನೀಡಿದರು.

## ಅಂಬೇಡ್ಕರ್ ಸಂವಿಧಾನ ಎಲ್ಲರಿಗೂ ದಾರಿದೀಪ



» **ಪರಶುರಾಂಪುರ**

ಡಾ.ಬಿ.ಆರ್ ಅಂಬೇಡ್ಕರ್ ಪಕ್ಷ ಹಾಗೂ ಜನಾಂಗಕ್ಕೆ ಸೀಮಿತರಾಗದೇ, ಸಂವಿಧಾನ ರಚನೆ ಮೂಲಕ ವಿಶ್ವಕ್ಕೆ ಮಾದರಿಯಾದ ಭಾರತರತ್ನ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು. ಗ್ರಾಮದ ಕೆಪಿಎಸ್ ಶಾಲಾ ಆವರಣದಲ್ಲಿ ಸೋಮವಾರ ಹೋಬಳಿ ಮಟ್ಟದ ಎಲ್ಲಾ ದಲಿತ ಸಂಘಟನೆಗಳು, ಮಾದಿಗ ನೌಕರ ವರ್ಗ ಹಾಗೂ ದಲಿತ ಭೀಮಾ ಯುವಕ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಡಾ.ಭೀಮಾರಾವ್ ಅಂಬೇಡ್ಕರ್ ಮತ್ತು ಬಾಬು ಜಗಜೀವನರಾಂ ಜಯಂತೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದರು.ಹಲವಾರು ದಾರ್ಶನಿಕರು ಸಾಂಸ್ಕೃತಿಕವಾಗಿ ಅಪಾರ ಕೊಡುಗೆ ನೀಡಿದ್ದಾರೆ. ಅಂತವರ ಜಯಂತಿಗಳನ್ನ ಎಲ್ಲರೂ ಸೇರಿ ಪಕ್ಷಾತೀತವಾಗಿ ಆಯೋಜನೆಯಾಗುವುದರ ನಡುವೆಅಂಬೇಡ್ಕರ್ ಹೆಸರನ್ನುಕೇಳದವರಿಲ್ಲಆಗಾಗಿ ಎಲ್ಲರಿಗೂ ದಾರಿದೀಪವಾಗುತ್ತಾ, ಕೊಡುಗೆಯಾಗಿ ಸಂವಿಧಾನ ನೀಡಿದ್ದಾರೆ ಎಂದರು.ಕವಿ, ಪತ್ರಕರ್ತ ಕೊರ್ಲಕುಂಟೆ ತಿಪ್ಪೇಸ್ವಾಮಿ ಮಾತನಾಡಿ, ನಾಡಿಗೆ ಅಪಾರ ಕೊಡುಗೆ ನೀಡಿದ ಮಹಾತ್ಮರ ಜಯಂತಿ ಆಚರಣೆ ಎಂದರೇ ಅದೋಂದು ಜಾಗೃತಿ ಕಾರ್ಯಕ್ರಮ ಎಂದರು.

ಗ್ರಾಪಂ ಸದಸ್ಯ ಪಿ.ಓ ಪ್ರಕಾಶ್ ಮಾತನಾಡಿ, ಸಂವಿಧಾನ ನಮ್ಮಗಳ ಜೀವಾಳ ಅದರ ಆಶಯಗಳನ್ನ ತಿಳಿಯುತ್ತಾ, ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ಮೂಲಕ ಸಮಾಜಮುಖಿ ಬನ್ನಿ ಎಂದರು.

ಈ ವೇಳೆಯಲ್ಲಿ ಅತಿಥಿಗಳನ್ನ ಕುಂಭಮೇಳ ಹಾಗೂ ಜನಪದ ವಾದ್ಯಗಳೊಂದಿಗೆ ವೇದಿಕೆಗೆ ಕರೆತರಲಾಯಿತು. ಬಳಿಕ ಗಣ್ಯರು ಬುದ್ಧ, ಬಸವ, ಅಂಬೇಡ್ಕರ್, ಜಗಜೀವನರಾಂ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ವೇದಿಕೆಯಲ್ಲಿ ಸಾಧನೆ ಮಾಡಿದ ಸಮಾಜದ ವಿದ್ಯಾರ್ಥಿಗಳ ಜೊತೆ ಇನ್ನಿತರನ್ನ ಗೌರವಿಸಲಾಯಿತು.ಗ್ರಾಪಂ ಅಧ್ಯಕ್ಷ ರುದ್ರೇಶ್, ಉಪಾಧ್ಯಕ್ಷೆ ಸರೋಜಮ್ಮ, ಸದಸ್ಯರಾದ ಜಗಲೂರುಸ್ವಾಮಿ, ನಾಗಭೂಷಣ್, ಪಿ.ಓ ಪ್ರಕಾಶ್, ಓಬಳೇಶ್, ಕೃಷ್ಣಪ್ಪ, ಅನಿತಾ, ಜಿಲ್ಲಾ ಗ್ಯಾರಂಟಿ ಸದಸ್ಯರಾದ ಚೆನ್ನಕೇಶವ, ಪ್ರಕಾಶ್, ಕೆಡಿಪಿ ಸದಸ್ಯ ಬಸವರಾಜು, ಜಯಕುಮಾರ್, ಜಿಪಂ ಮಾಜಿ ಅಧ್ಯಕ್ಷ ರಂಗಸ್ವಾಮಿ, ಕೆ.ಬಾಬು, ಆಂಜನೇಯ, ಧನಂಜಯ, ನಗರಸಭಾ ಸದಸ್ಯ ರಮೇಶ ಗೌಡ ಹಾಗೂ ಗ್ರಾಮ ಸೇರಿದಂತೆ ಹೋಬಳಿ ವ್ಯಾಪ್ತಿಯ ದಲಿತ ಸಂಘಟನೆಗಳ ಪದಾಧಿಕಾರಿಗಳು, ಕಾರ್ಯಕರ್ತರು, ಹಿರಿಯರು, ಮುಖಂಡರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ಆಸ್ತಿ ತೆರಿಗೆ ಪಾವತಿಸಲು ಶೇ.5 ರಷ್ಟು ರಿಯಾಯಿತಿ

» **ದಾವಣಗೆರೆ**

ಪ್ರಸಕ್ತ ಸಾಲಿನ ಆಸ್ತಿ ತೆರಿಗೆಯನ್ನು ಮೇ ಮತ್ತು ಜೂನ್ ತಿಂಗಳಲ್ಲಿ ಪಾವತಿಸಿ ಶೇ.5 ರಷ್ಟು ರಿಯಾಯಿತಿಯನ್ನು ಪಡೆಯಲು ಮತ್ತು http://davangerecitycorp.org ಲಿಂಕ್ ನ್ನು ಆನ್‌ಲೈನ್ ಮೂಲಕ ಯು.ಪಿ.ಐ ಉಪಯೋಗಿಸಿಕೊಂಡು ಆಸ್ತಿ ತೆರಿಗೆ ಪಾವತಿಸಲು ಅವಕಾಶ ಮಾಡಿಕೊಳ್ಳಲಾಗಿದೆ.

# ಸಂಭ್ರಮ, ಸಡಗರ ಭಕ್ತಿಯಿಂದ ನಡೆದ ಗ್ರಾಮ ದೇವತೆ ಶ್ರೀವೀರಭದ್ರಸ್ವಾಮಿಯ ಭವ್ಯ ರಥೋತ್ಸವ









» **ಚಳ್ಳಕೆರೆ**

ನಗರದ ಗ್ರಾಮ ದೇವತೆ, ಲಕ್ಷಾಂತರ ಭಕ್ತರ ಆರಾಧ್ಯ ದೈವ ಶ್ರೀವೀರಭದ್ರಸ್ವಾಮಿ ಭವ್ಯರಥೋತ್ಸವ ಸೋಮವಾರ ಸಾವಿರ ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆಯಿತು.

ಸ್ವಾಮಿಯ ಭಕ್ತರು ರಥೋತ್ಸವಕ್ಕೆ ವಿವಿಧ ಆಕಾರದ ಹೂವಿನ ಹಾರಗಳನ್ನು ಮೆರವಣಿಗೆಯೊಂದಿಗೆ ತಂದು ರಥಕ್ಕೆ ಸಮರ್ಪಿಸಿದರು. ರಥೋತ್ಸವದಲ್ಲಿ ನಂದಿಕೋಲು, ಕೋಲಾಟ ವಿವಿಧ ಕಲಾತಂಡಗಳು ಮೆರಗು ನೀಡಿದ್ದವು. ದಾರಿ ಯುದ್ದಕ್ಕೂ ಶ್ರೀಸ್ವಾಮಿಗೆ ಜೈಕಾರಹಾಕಿದರು. ದೇವಸ್ಥಾನದ ಧರ್ಮದರ್ಶಿಗಳು, ಆಡಳಿತ ಮಂಡಳಿ, ತಳವಾರು, ಆಯಾಗಾರರು ರಥೋತ್ಸವವನ್ನು ಯಶಸ್ವಿಯಾಗಿ ನಡೆಸಿಕೊಟ್ಟರು.

**ಮುಕ್ತಿಬಾವುಟ ಹರಾಜು :** ಪ್ರತಿವರ್ಷದಂತೆ ಈ ವರ್ಷವೂ ದೊಡ್ಡ ರಥೋತ್ಸವ ಆರಂಭಕ್ಕೂ ಮುನ್ನ, ಪುರಂತರ ವೀರನಾಟ್ಯದ ನಂತರ ನೆರೆದಿದ್ದ ಭಕ್ತರ ಸಮ್ಮುಖದಲ್ಲಿ ಮುಕ್ತಿಬಾವುಟವನ್ನು ಬಹಿರಂಗವಾಗಿ ಹರಾಜು ಮಾಡಲಾಯಿತು. ಈ ಬಾರಿಯೂ ಸಹ ಕೆ.ಸಿ.ನಾಗರಾಜು, ಸಿ.ವೀರಭದ್ರಬಾಬು ಹರಾಜಿನಲ್ಲಿ ಭಾಗವಹಿಸಿದ್ದರು. ಅಂತಿಮವಾಗಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ 15.50ಲಕ್ಷಕ್ಕೆ ಮುಕ್ತಿಬಾವುಟವನ್ನು ಹರಾಜಿನಲ್ಲಿ ಪಡೆದುಕೊಂಡರು.

**ಅಗ್ನಿಕುಂಡಕ್ಕೆಸಾಕ್ಷಿಯಾದಸಾವಿರಾರುಭಕ್ತರು:** ಪ್ರತಿವರ್ಷದಂತೆ ಈ ವರ್ಷವೂ ಸಹ ಜಾತ್ರೆ ನಡೆಯುವ ಬೆಳಗಿನ ಜಾವ ದೇವಸ್ಥಾನದ ಮುಂಭಾಗದಲ್ಲಿ ನಿರ್ಮಿಸಿರುವ ಅಗ್ನಿಕುಂಡದಲ್ಲಿ ಹರಕೆ ಹೊತ್ತ ಭಕ್ತರು ಪುರಂತರಪ್ಪ ಹಾಯ್ದು ನಂತರ ಅಗ್ನಿಯನ್ನು ಹಾಯ್ದು ತಮ್ಮ ಹರಿಕೆಯನ್ನು ತೀರಿಸಿಕೊಂಡರು. ಬೆಳಗಿನ ಜಾವ ಸುಮಾರು 5 ಗಂಟೆ ಅಗ್ನಿಕುಂಡ ನಡೆದರೂ ಸಹ ಸಾವಿರಾರು ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಕಳೆದ ವರ್ಷಕ್ಕಿಂತ ಈ ವರ್ಷ ಹೆಚ್ಚಿನ ಭಕ್ತರು ಜಮಾಯಿಸಿದ್ದು ವಿಶೇಷವಾಗಿತ್ತು.

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ, ವಾಣಿಜ್ಯೋದ್ಯಮಿ ಕೆ.ಸಿ.ನಾಗರಾಜು, ಸಹಕಾರಿ ಸಂಘಗಳ ಹಿರಿಯ ದುರೀಣ ಸಿ.ವೀರಭದ್ರಬಾಬು, ನಗರಸಭಾ ಅಧ್ಯಕ್ಷೆ ಆರ್.ಮಂಜುಳಾ, ಉಪಾಧ್ಯಕ್ಷೆ ಕವಿತಾ ಮುಂತಾದವರು ಭಾಗವಹಿಸಿದ್ದರು.

# ಅಂತರಾಷ್ಟ್ರೀಯ ಶುಶ್ರೂಷಕಿಯರ ದಿನಾಚರಣೆ

» **ಚಿತ್ರದುರ್ಗ**




ಚಿಕಿತ್ಸೆಗಾಗಿ ಬರುವ ರೋಗಿಗಳಿಗೆ ನಿಸ್ವಾರ್ಥ ಮನಸ್ಸಿನಿಂದ ಸೇವೆ ಸಲ್ಲಿಸಿ ಎಂದು ಜಿಲ್ಲಾ ಮದಕರಿನಾಯಕ ವಿದ್ಯಾಸಂಸ್ಥೆಯ ಅಧ್ಯಕ್ಷ ಎಸ್.ಸಂದೀಪ್ ನರ್ಸಿಂಗ್ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕೋಟೆ ಮುಂಭಾಗವಿರುವ ಮದಕರಿನಾಯಕ ವಿದ್ಯಾಸಂಸ್ಥೆ ಮದರ್ ತೆರೆಸಾ ನರ್ಸಿಂಗ್ ಸ್ಕೂಲ್‌ನಲ್ಲಿ ಸೋಮವಾರ ನಡೆದ ಅಂತರಾಷ್ಟ್ರೀಯ ಶುಶ್ರೂಷಕಿಯರ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.

ನರ್ಸ್‌ಗಳನ್ನು ಸಮಾಜದಲ್ಲಿ ದೇವರಂತೆ ಕಾಣಲಾಗುವುದು. ನರ್ಸಿಂಗ್ ವೃತ್ತಿ ಅತ್ಯಂತ ಪವಿತ್ರವಾದುದು. ಪ್ಲೋರೆನ್ಸ್ ನೈಟಿಂಗೇಲ್‌ರವರ ಆದರ್ಶ, ತತ್ವ ಹಾಗೂ ಅವರಲ್ಲಿದ್ದ ಸೇವಾ ಮನೋಭಾವನೆಯನ್ನು ಜೀವನದಲ್ಲಿ ರೂಢಿಸಿಕೊಂಡಾಗ ಮಾತ್ರ ಅಂತರಾಷ್ಟ್ರೀಯ ಶುಶ್ರೂಷಕಿಯರ ದಿನಾಚರಣೆಗೆ ಗೌರವ ಕೊಟ್ಟಂತಾಗುತ್ತದೆ. ನರ್ಸಿಂಗ್ ವೃತ್ತಿಯಲ್ಲಿ ಅಪ್ಪಿ ತಪ್ಪಿಯೂ ತಪ್ಪು ಮಾಡಬೇಡಿ. ಆತ್ಮವಿಶ್ವಾಸ ಮೂಡಿಸಿಕೊಳ್ಳಿ. ನಮ್ಮ ನರ್ಸಿಂಗ್ ಕಾಲೇಜಿನಲ್ಲಿ ಓದಿದವರು ದೇಶ-ವಿದೇಶಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆಂದು ಹೇಳಿದರು.

ಮದರ್ ತೆರೆಸಾ ಸ್ಕೂಲ್ ಆಫ್ ನರ್ಸಿಂಗ್ ಪ್ರಾಂಶುಪಾಲರಾದ ಮಂಜುಳ ಆರ್ ಮಾತನಾಡಿ ಪ್ಲೋರೆನ್ಸ್ ನೈಟಿಂಗೇಲ್‌ರನ್ನು ಸ್ಮರಿಸುವುದರ ಜೊತೆ ಅವರ ತತ್ವ, ಆದರ್ಶದ ಹಾದಿಯಲ್ಲಿ ನರ್ಸ್‌ಗಳು ಸಾಗಬೇಕು. ನರ್ಸಿಂಗ್ ಶಿಕ್ಷಣ ಮುಗಿಸಿದ ನಂತರ ಕೆಲಸ ಮಾಡಿ ವೇತನ ಪಡೆಯುವುದು ಮುಖ್ಯವಲ್ಲ. ನರ್ಸಿಂಗ್ ಪದದ ಪ್ರಾಮುಖ್ಯತೆಯನ್ನು ಅರಿತು ರೋಗಿಗಳ ಸೇವೆ ಸಲ್ಲಿಸಬೇಕು. ನರ್ಸ್‌ಗಳು ಮಾಡುವ ಕೆಲಸವನ್ನು ಕೆಲವು ಕಡೆ ಅಟೆಂಡರ್‌ಗಳು ಮಾಡುತ್ತಿರುವುದು ನೋವಿನ ಸಂಗತಿ. ಪ್ಲೋರೆನ್ಸ್ ನೈಟಿಂಗೇಲ್‌ರವರು ಕತ್ತಲಲ್ಲಿ ಲ್ಯಾಂಪ್ ಹಿಡಿದು ರೋಗಿಗಳ ಆರೈಕೆ ಮಾಡುತ್ತಿದ್ದರು. ಹಾಗಾಗಿ ನಿಮಗೆ ಸಿಕ್ಕಿರುವ ಅವಕಾಶಗಳನ್ನು ಸರಿಯಾಗಿ ಬಳಸಿಕೊಳ್ಳಿ ಎಂದು ಸಲಹೆ ನೀಡಿದರು.

ನಿಮ್ಮನ್ನು ನಂಬಿ ಬರುವ ರೋಗಿಗಳಿಗೆ ಪರಿಶುದ್ದ ನಿಷ್ಕಲ್ಮಶ ಮನಸ್ಸಿನಿಂದ ಸೇವೆ ಮಾಡಿ ಕೇವಲ ವೇತನಕ್ಕಾಗಿ ಕೆಲಸ ಮಾಡಬೇಡಿ. ನರ್ಸಿಂಗ್ ವೃತ್ತಿಯಲ್ಲಿ ಪ್ರಾಮಾಣಿಕತೆಯಿರಲಿ. ವರ್ಷಕ್ಕೊಂದು ದಿನ ನರ್ಸಿಂಗ್ ಡೇ ಆಚರಿಸಿದರೆ ಸಾಲದು. ಪ್ರತಿನಿತ್ಯವೂ ಆಚರಣೆಯಾಗಬೇಕೆಂದರು.

ಮದರ್ ತೆರೆಸಾ ಸ್ಕೂಲ್ ಆಫ್ ನರ್ಸಿಂಗ್‌ನ ಉಪನ್ಯಾಸಕಿ ಕೆ.ಪೂಜಾ ಮಾತನಾಡಿ 1820 ಮೇ 12 ರಂದು ಜನಿಸಿದ ಪ್ಲೋರೆನ್ಸ್ ನೈಟಿಂಗೇಲ್‌ಗೆ ಸಣ್ಣ ವಯಸ್ಸಿನಿಂದಲೆ ಸೇವೆ ಮಾಡಬೇಕೆಂಬ ಹಂಬಲವಿತ್ತು. ದಾದಿಯಾಗಬೇಕೆಂಬ ಕನಸು ಕಂಡಿದ್ದ ಅವರು ಜರ್ಮನಿಯಲ್ಲಿ ದಾದಿಯರ ಕೇಂದ್ರ ತೆರೆದು ಮೂರು ತಿಂಗಳ ತರಬೇತಿ ಪಡೆಯುತ್ತಾರೆ. ಇಂಗ್ಲೆಂಡ್‌ನಲ್ಲಿ ಒಂದು ವರ್ಷ ತರಬೇತಿ ಮುಗಿಸಿ ಯುದ್ದದಲ್ಲಿ ಗಾಯಗೊಂಡ ಯೋಧರಿಗೆ ಚಿಕಿತ್ಸೆ ನೀಡುತ್ತಾರೆ. ಕತ್ತಲೆಯಲ್ಲಿ ಲ್ಯಾಂಪ್ ಹಿಡಿದುಕೊಂಡು ಅದರ ಬೆಳಕಿನಲ್ಲಿ ಶುಶ್ರೂಷೆ ಮಾಡಿದ್ದರಿಂದ ಎ ಲೇಡಿ ವಿಥ್ ಲ್ಯಾಂಪ್ ಎಂಬ ಹೆಸರು ಪಡೆದರು. 90 ವರ್ಷಗಳ ಕಾಲ ಬದುಕಿದ್ದ ಪ್ಲೋರೆನ್ಸ್‌ನೈಟಿಂಗೇಲ್ ಜೀವನಪೂರ್ತಿ ಪರರ ಸೇವೆಯಲ್ಲಿ ತೃಪ್ತಿ ಕಂಡುಕೊಂಡರು. ಅಂತಹ ತ್ಯಾಗಮಯಿಯ ದಾರಿಯಲ್ಲಿ ನರ್ಸಿಂಗ್ ವಿದ್ಯಾರ್ಥಿಗಳು ನಡೆಯಬೇಕೆಂದರು.

ಉಪನ್ಯಾಸಕಿ ವಿದ್ಯಾ ಎನ್.ಮಾತನಾಡುತ್ತ ಸೇವೆಯೆ ಪ್ಲೋರೆನ್ಸ್ ನೈಟಿಂಗೇಲ್‌ರವರ ಧ್ಯೇಯವಾಗಿತ್ತು. 1840 ರಲ್ಲಿ ಶುಶ್ರೂಷಕ ಸೇವೆಯನ್ನು ಆರಂಭಿಸಿದ ಅವರು ಯುದ್ದದಲ್ಲಿ ಗಾಯಗೊಂಡವರಿಗೆ ಶುಶ್ರುಷೆ ಮಾಡುತ್ತ 1910 ಆ.13 ರಂದು ಮರಣ ಹೊಂದುತ್ತಾರೆ. ನರ್ಸಿಂಗ್ ಎಂದರೆ ಸೇವೆ ಎಂದರ್ಥ ಎಂದು ನುಡಿದರು.

ನರ್ಸಿಂಗ್ ಸ್ಕೂಲ್‌ನ ಹಿರಿಯ ಉಪನ್ಯಾಸಕಿ ವಿ.ಎಸ್.ಪೋತದಾರ್, ರೂಪ ಎಂ.ಎನ್. ಇವರುಗಳು ವೇದಿಕೆಯಲ್ಲಿದ್ದರು.

ಜಿಲ್ಲಾ ಮದಕರಿನಾಯಕ ವಿದ್ಯಾಸಂಸ್ಥೆ ಆಡಳಿತಾಧಿಕಾರಿ ಎಸ್.ಸಾಗರ್ ಈ ಸಂದರ್ಭದಲ್ಲಿದ್ದರು.

## ಅಮೆರಿಕಾ ಹೇಳಿದ ಕೂಡಲೇ ನಾವು ಯುದ್ಧವನ್ನು ಹಿಂತೆಗೆದರೆ ಹೇಗೆ?

» **ಚಿತ್ರದುರ್ಗ**



ನಾವು ಯುದ್ಧಕ್ಕೆ ಹೋದಮೇಲೆ ತಾರ್ಕಿಕ ಅಂತ್ಯ ಸಿಗಬೇಕು ಅದನ್ನೆಲ್ಲ ಲೆಕ್ಕ ಹಾಕಿ ಯುದ್ಧಕ್ಕೆ ಹೋಗಬೇಕು ಅಮೆರಿಕಾ ಹೇಳಿದ ಕೂಡಲೇ ನಾವು ಯುದ್ಧವನ್ನು ಹಿಂತೆಗೆದರೆ ಹೇಗೆ? ನಮ್ಮ ಉದ್ದೇಶ ಈಡೇರಿದ್ಯಾ ಎಂಬುದು ನನ್ನ ಮೊದಲ ಪ್ರಶ್ನೆ? ಇದು ಭಾರತದ ನಾಗರೀಕರ ಎಲ್ಲರ ಮನಸ್ಸಿನಲ್ಲಿಯೂ ಉದ್ಭವವಾಗುವ ಪ್ರಶ್ನೆ ಇದಕ್ಕೆ ಕೇಂದ್ರ ಸರ್ಕಾರ ಉತ್ತರ ಕೊಡಬೇಕಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡರವರು ಭಾರತ ಪಾಕ್ ನಡುವೆ ಕದನ ವಿರಾಮ ಹಿನ್ನೆಲೆ ಕೇಂದ್ರ ಸರ್ಕಾರವನ್ನು ಪ್ರಶ್ನಿಸಿದ್ದಾರೆ.ಚಿತ್ರದುರ್ಗ ನಗರಕ್ಕೆ ಭೇಟಿ ನೀಡಿದ ಅವರನ್ನು ಬೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಪಾಕ್ ಭಾರತ ನಡುವಿನ ಕದನ ವಿರಾಮವನ್ನು ನಾವು ಸ್ವಾಗತಿಸುತ್ತೇವೆ ಆದರೆ ಸಾರ್ವಜನಿಕ ವಲಯದಲ್ಲಿ ಒಂದು ಪ್ರಶ್ನೆ ತಲೆಯೆತ್ತಿದೆ ಮೊದಲು ನಾವು ಎಲ್ಲಾ ವಿಷಯ ವಿಷಯವನ್ನು ಅವಲೋಕಿಸಿ ಯುದ್ಧ ಮಾಡಬೇಕು ಆರಂಭ ಮಾಡಿದ ಮೇಲೆ ಅವರಿಗೆ ಪಾಠ ಕಲಿಸಬೇಕಾಗಿರುವುದು ನಮ್ಮ ಗುರಿ ಆದರೆ ನಿಜವಾಗಿಯೂ ಅವರಿಗೆ ಪಾಠ ಕಳಿಸಿದ್ದೀವಾ ಎಂಬುದು ನನ್ನ ಪ್ರಶ್ನೆ ಭಾರತಕ್ಕೆ ನಾವು ಪಾಠ ಕಲಿಸಿದ್ದೇವೆ ಎಂದು ಅವರು ಹೇಳಿಕೊಳ್ಳುತ್ತಾರೆ ಅವರಿಗೆ ನಾವು ಪಾಠ ಕಲಿಸಿದ್ದೀವಿ ಎಂದು ಹೇಳಿಕೊಳ್ತೀವಿ ಪಾಕಿಸ್ತಾನ ನಮ್ಮ ಆಂತರಿಕ ವಿಚಾರದಲ್ಲಿ ಬೆರಳು ತೋರಿಸುವ ದುಸ್ಸಾಹಸ ಮಾಡದಂತ ಪಾಠ ಕಲಿಸಬೇಕಿತ್ತು ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಪಾಕಿಸ್ತಾನಕ್ಕೆ ಶಾಶ್ವತ ಪಾಠ ಕಲಿಸಬೇಕೆಂಬ ಸಂಕಲ್ಪ ನಾವು ಮಾಡಿದ್ದೇವೆ ಕದನ ವಿರಾಮ ಮಾಡುವಾಗ ನಮ್ಮ ಉದ್ದೇಶ ಈಡೇರಿದ್ಯಾ ಎಂಬುದನ್ನು ಕೇಂದ್ರ ಸರ್ಕಾರ ಉತ್ತರಿಸಬೇಕಿದೆ ಎರಡು ದೇಶಗಳು ಕದನ ವಿರಾಮವನ್ನು ಗೌರವಿಸುತ್ತಿವೆ ಕದನ ವಿರಾಮಕ್ಕೆ ಮುನ್ನ ನಮ್ಮ ಗುರಿ ಈಡೇರಿದ್ಯಾ ಎಂಬುದು ಪ್ರಶ್ನೆಯಾಗಿ ಉಳಿದಿದೆ ನಾವು ಪಾಕಿಸ್ತಾನದವರು ಮಾತನಾಡಿಕೊಳ್ಳುವುದು ಒಂದು ಭಾಗ ಬೇರೆ ದೇಶದವರು ಮಧ್ಯಸ್ಥಿಕೆ ವಹಿಸುವುದು ಇನ್ನೊಂದು ಭಾಗ ಟ್ರಂಪ್ ಹೇಳಿದ ಕೂಡಲೇ ನಾವು ಮಂಡಿ ಊರಿದಾಗ ನಮ್ಮ ಸಾರ್ವಭೌಮ ಏನಾಯ್ತು? ಅವರು ಏನ್ ಹೆಡ್ ಮಾಸ್ಟರ್ ನಾವು ಸ್ಕೂಲ್ ಮಕ್ಕಳಾ? ಅವರು ಹೇಳಿದ ಕೂಡಲೇ ನಾವು ಎಸ್ ಸಾರ್ ಅಂತ ಒಪ್ಪಿಕೊಂಡ್ರೆ ಹೇಗೆ?

**ಪ್ರಮುಖ ಸುದ್ದಿ**

# ಯೋಜಿತವಾಗಿ ಕಾರ್ಯನಿರ್ವಹಿಸಿದರೆ ಕ್ಷೇತ್ರದ ಅಭಿವೃದ್ಧಿ

» **ಚಳ್ಳಕೆರೆ**



ಪ್ರತಿ ಮೂರು ತಿಂಗಳಿಗೆ ಒಮ್ಮೆ ನಡೆಯುವ ಕ್ಷೇತ್ರ ವ್ಯಾಪ್ತಿಯ ತ್ರೈಮಾಸಿಕ ಸಭೆ ಸರ್ಕಾರ ಆಡಳಿತದ ರೀತಿ, ನೀತಿಯನ್ನು ಅರಿತು ಅಭಿವೃದ್ಧಿ ಹಾಗೂ ಸಾರ್ವಜನಿಕ ಸಮಸ್ಯೆಗಳ ಬಗ್ಗೆ ಸ್ಪಂದನೆ ಮಾಹಿತಿ ಪಡೆಯಲಾಗುವುದು. ಪ್ರತಿಯೊಂದು ಇಲಾಖೆ ಅಧಿಕಾರಿ ಜವಾಬ್ದಾರಿಯುತವಾಗಿ ಸರ್ಕಾರದ ನಿಯಮಗಳನ್ನು ಪಾಲಿಸಿದಲ್ಲಿ ಯಾವುದೇ ಸಮಸ್ಯೆ ಎದುರಾಗದು. ಜನರ ವಿಶ್ವಾಸವನ್ನು ಗಳಿಸಿ ಕೆಲಸ ನಿರ್ವಹಿಸುವ ಅಧಿಕಾರಿ ಮಾತ್ರ ಸರ್ಕಾರಕ್ಕೆ ಗೌರವ ತರುತ್ತಾನೆಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಸೋಮವಾರ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದ ಸಭಾಂಗಣದಲ್ಲಿ ತ್ರೈಮಾಸಿಕ ಸಭೆಯ ಅದ್ಯಕ್ಷತೆ ವಹಿಸಿ ಮಾತನಾಡಿದರು. ಕಳೆದ ಮೂರು ತಿಂಗಳ ಹಿಂದೆ ಸಭೆಯಲ್ಲಿ ಕೈಗೊಂಡ ನಿರ್ಣಯಗಳು ಜಾರಿ ಹಾಗೂ ಅವುಗಳ ವಾಸ್ತವ ಸ್ಥಿತಿಯನ್ನು ಅರಿಯಲು ಸಭೆ ಸಹಕಾರಿಯಾಗಿದೆ. ಆದರೆ, ಬಹುತೇಕ ಇಲಾಖೆ ಅಧಿಕಾರಿಗಳು ಕಳೆದ ಬಾರಿಯ ತ್ರೈಮಾಸಿಕ ಸಭೆಯ ವರದಿ ಅನುಷ್ಠಾನದಲ್ಲಿ ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಿಲ್ಲವೆಂಬುವುದು ತಿಳಿಯುತ್ತಿದೆ. ಅಧಿಕಾರಿಗಳು ವರದಿ ನೀಡುವ ಮುನ್ನ ಜಾಗ್ರತೆ ವಹಿಸಬೇಕು. ಸಭೆಗೆ ಆಗಮಿಸಿ ಯಾವುದೇ ವಿಷಯಕ್ಕೆ ಯಾವುದೋ ಮಾಹಿತಿ ಕೊಟ್ಟರೆ ಅದುನಿಮ್ಮ ನಿರ್ಲಕ್ಷ್ಯತನವನ್ನು ತೋರುತ್ತದೆ. ತ್ರೈಮಾಸಿಕ ಸಭೆಯ ಉದ್ದೇಶ ಸಫಲವಾಗಬೇಕಾದಲ್ಲಿ ಎಲ್ಲಾ ಇಲಾಖೆ ಅಧಿಕಾರಿಗಳು ಕೈಜೋಡಿಸಬೇಕು ಎಂದರು.

ಪ್ರಾರಂಭದಲ್ಲಿ ಕೃಷಿ, ತೋಟಗಾರಿಕೆ ಇಲಾಖೆ ಪ್ರಗತಿ ಅವಲೋಕಿಸಿದ ಶಾಸಕರು, ಕ್ಷೇತ್ರದ ತುರುವನೂರು ಹೋಬಳಿಯ ಆರು ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಮಳೆಗಾಳಿಗೆ ಸುಮಾರು 86ಲಕ್ಷ ನಷ್ಟವಾಗಿದೆ ಎಂದು ಅಲ್ಲಿನ ಅಧಿಕಾರಿಗಳು ತಿಳಿಸಿದರೆ, ಈ ಭಾಗದ 20 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೇವಲ 36ಲಕ್ಷ ನಷ್ಟವೆಂದು ಅಧಿಕಾರಿಗಳ ದಾಖಲೆಯಲ್ಲಿದೆ. ವರದಿ ಸಿದ್ದಪಡಿಸುವಲ್ಲಿ ಲೋಪವಾಗಿದ್ದರೆ ಸರಿಪಡಿಸಿಕೊಳ್ಳಿ ಎಂದು ಸೂಚಿಸಿದರು. ಕುಡಿಯುವ ನೀರು ಇಲಾಖೆ ಅಧಿಕಾರಿ ದಯಾನಂದವರೆಗೆ ಸೂಚಿಸಿದ ಶಾಸಕರು, ಕ್ಷೇತ್ರದಾದ್ಯಂತ ಶುದ್ಧಕುಡಿಯುವ ನೀರಿನ ಘಟಕಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಹಸ್ತಾಂತ ಮಾಡಿ ಎಂದರು. ಗ್ರಾಮೀಣ ಮಟ್ಟದ ರಸ್ತೆಗಳಲ್ಲಿ ಜಾಲಿಬೆಳೆದು ವಾಹನ, ಜನರ ಸಂಚಾರಕ್ಕೆ ಅಡಿಯಾಗುತ್ತಿತ್ತು ಈ ಬಗ್ಗೆ ಪಂಚಾಯಿತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಪಿಡಿಓಗಳು ಜಂಟಿಯಾಗಿ ಜಾಲಿಗಿಡಗಳನ್ನು ತೆರವುಗೊಳಿಸುವಂತೆ ಸೂಚಿಸಿದರು.

ಕಾರ್ಮಿಕ ಅಧಿಕಾರಿ ಮಾಹಿತಿ ನೀಡಿ, ಇದುವರೆಗೂ ತಾಲ್ಲೂಕಿನಾದ್ಯಂತ 39ಸಾವಿರ ಕಾರ್ಮಿಕರು ನೊಂದಾವಣೆ ಮಾಡಿಕೊಟ್ಟಿದ್ದಾರೆ ಎಂದರು. ಅಬಕಾರಿ ಇಲಾಖೆ ಅಧಿಕಾರಿ ಮಾಹಿತಿ ನೀಡಿ, ಅಂಗಡಿಗಳಲ್ಲಿ ಮಧ್ಯಮಾರಾಟ ಮಾಡುವುದನ್ನು ನಿಯಂತ್ರಿಸಿದೆ. ಕೆಎಸ್‌ಆರ್‌ಟಿಸಿ ಡಿಪೋ ವ್ಯವಸ್ಥಾಪಕ ಪ್ರಭು, ಶಾಸಕರ ಸೂಚನೆಯಂತೆ ಗ್ರಾಮೀಣ ಭಾಗ ಹಾಗೂ ಜಿಟಿಟಿಸಿ, ಆದರ್ಶ ಶಾಲೆ, ಹಾಸ್ಟಲ್ ವಿದ್ಯಾರ್ಥಿಗಳಿಗೆ ಪ್ರತಿನಿತ್ಯ ಬಸ್ ಸೌಕರ್ಯ ಕಲ್ಪಿಸಿದೆ ಎಂದರು. ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಚನ್ನಮ್ಮನಾಗತಿಹಳ್ಳಿ ರಸ್ತೆ ರಿಪೇರಿ ಹೆಸರಿನಲ್ಲಿ ಲಕ್ಷಾಂತರ ರೂಪಾಯಿ ಹಣ ದುರುಪಯೋಗವಾಗಿದೆ ಎಂದು ಮಾಹಿತಿ ಇದೆ ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ತನಿಖೆ ನಡೆಸಿ ವರದಿ ನೀಡಬೇಕೆಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಪ್ರಸ್ತುತ ಎಸ್‌ಎಸ್‌ಎಲ್‌ಸಿ ಫಲಿತಾಂಶದ ಬಗ್ಗೆ ಮಾಹಿತಿ ನೀಡಿದಾಗ ಬೇಸರಗೊಂಡ ಶಾಸಕರು ಕಳೆದ ಬಾರಿ ಚಳ್ಳಕೆರೆ ಎಸ್‌ಎಸ್‌ಎಲ್‌ಸಿ ಫಲಿತಾಂಶ ರಾಜ್ಯಮಟ್ಟದಲ್ಲಿ ಹೆಸರು ಮಾಡಿತ್ತು. ಆದರೆ, ಈ ಬಾರಿ ಜಿಲ್ಲಾ ಮಟ್ಟದಲ್ಲೇ ಮೂರನೇ ಸ್ಥಾನ ಪಡೆದಿದೆ.

ಫಲಿತಾಂಶ ಕಡಿಮೆಯಾಗಲು ಕಾರಣವನ್ನು ಹುಡುಕಿ ಸರಿಪಡಿಸುವಂತೆ ಸೂಚಿಸಿದರು.

## ಫಾಸ್ಟ್ ನ್ಯೂಸ್

### ಡಿ.ಇ.ಎಲ್.ಇಡಿ. ದಾಖಲಾತಿಗೆ ಅರ್ಜಿ

» ದಾವಣಗೆರೆ

ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು ಇವರು ಪ್ರಸಕ್ತ ಸಾಲಿನ ಪ್ರಥಮ ವರ್ಷದ ಡಿ.ಇ.ಎಲ್.ಇಡಿ.ದಾಖಲಾತಿ ಕನ್ನಡ ಮತ್ತು ಉರ್ದು ಮಾಧ್ಯಮದಲ್ಲಿ ಪಡೆಯಲು ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು WWW.schooleducation.karnataka.gov.in ನಲ್ಲಿ ಡೌನ್ ಲೋಡ್ ಮಾಡಿಕೊಂಡು ನಿಗದಿತ ದಾಖಲೆಗಳು ಮತ್ತು ಡಿ.ಡಿ.ಯೊಂದಿಗೆ ಜೂನ್ 6 ರೊಳಗಾಗಿ ನೋಡಲ್ ಕೇಂದ್ರವಾದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ,(ಡಯಟ್), ಇಲ್ಲಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸುವ ವಿಧಾನ ಅರ್ಹತೆ. ಮೀಸಲಾತಿ ವಿವರಗಳು ಮತ್ತು ಇತರೆ ಮಾಹಿತಿಗಳನ್ನು WWW.schooleducation.karnataka.gov.inನಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಯನ್ನು ದೂ.ಸಂ: ಕನ್ನಡ ಮಾಧ್ಯಮ – 9164489972, 988030377. 9844401092. 08192–231156 ಉರ್ದು ಮಾಧ್ಯಮ– 9164489972, 8867932439, 08192–231156 ಸಂಪರ್ಕಿಸಲು ಡಯಟ್ ಪ್ರಾಂಶುಪಾಲರಾದ ಗೀತಾ ತಿಳಿಸಿದ್ದಾರೆ.

### ಡಿಪ್ಲೊಮ ಪ್ರವೇಶಕ್ಕೆ ಅರ್ಜಿ

» ದಾವಣಗೆರೆ

ಪ್ರಸಕ್ತ ಸಾಲಿಗೆ ಮೈಸೂರಿನಲ್ಲಿನ ಜೆಎಸ್‌ಎಸ್ ಮಹಾವಿದ್ಯಾಪೀಠದಲ್ಲಿವಿಶೇಷಚೇತನರಿಗೆಡಿಪ್ಲೊಮ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಡಿಪ್ಲೊಮಾ ಮಟ್ಟದಲ್ಲಿ ತಾಂತ್ರಿಕ ಶಿಕ್ಷಣ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ದಾವಣಗೆರೆ ಜಿಲ್ಲೆ ವ್ಯಾಪ್ತಿಯಲ್ಲಿನ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ವಿಶೇಷಚೇತನ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜೆ ಎಸ್ ಎಸ್ ವಿಶೇಷಚೇತನರ ಪಾಲಿಟೆಕ್ನಿಕ್, ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಸಮುಚ್ಚಯ ಮೈಸೂರು–570006 ದೂ.ಸಂ:0821–2548315,2548316 ಹಾಗೂ ಇಮೇಲ್ jsspda@gmail.com, ವೆಬ್ ಸೈಟ್ www.jsspda.org ಸಂಪರ್ಕಿಸಲು ಪ್ರಾಂಶುಪಾಲರು ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ದಾವಣಗೆರೆ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ಮಹಾನಗರಪಾಲಿಕೆ ವತಿಯಿಂದ ಪಾದಚಾರಿರಸ್ತೆ (ಫುಟ್ಪಾತ್)ಕಾಮಗಾರಿ ಕೆಲಸ ಹಮ್ಮಿಕೊಂಡಿರುವುದರಿಂದ ಮೇ.13 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಎಂ.ಸಿ.ಸಿ.ಬಿ ಫೀಡರ್ ವ್ಯಾಪ್ತಿಯ ಸಿದ್ದವೀರಪ್ಪ ಬಡಾವಣೆ, ಎಂ.ಸಿ.ಸಿ. ಬಿ ಬ್ಲಾಕ್,ಎಸ್.ಎಸ್. ಲೇಔಟ್ ಎ. ಬ್ಲಾಕ್, ಕುವೆಂಪು ನಗರ, ಚಿಂದೋಡಿಲೀಲಾ ಕಲಾ ಕ್ಷೇತ್ರ, ಸುಕ್ಷೇಮಾ ಆಸ್ಪತ್ರೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

### ಪಾಂಡುರಂಗ ವಿಠಲ ರಥೋತ್ಸವ



» ಚಿತ್ರದುರ್ಗ

ತ್ಯಾಗರಾಜ ಬೀದಿಯಲ್ಲಿ ಪಾಂಡುರಂಗ ವಿಠಲ ರಥೋತ್ಸವ ಸೋಮವಾರ ವಿಜೃಂಭಣೆಯಿಂದ ನಡೆಯಿತು. ತಾಡಪತ್ರಿ ವಂಶಕ್ಕೆ ಒಲಿದು ಬಂದಿರುವ ಮೂರ್ತಿ ಪಾಂಡುರಂಗ ವಿಠಲ ದೇವಸ್ಥಾನದಲ್ಲಿ ಶ್ರದ್ಧಾ ಭಕ್ತಿಯಿಂದ ಪೂಜೆ ಸಲ್ಲಿಸಿದ ನಂತರ ಪಾಂಡುರಂಗವಿಠಲನನ್ನುರಥದಲ್ಲಿಕೂರಿಸಿದಬಳಿಕ ರಥವನ್ನು ನೆರೆದಿದ್ದವರು ಸ್ವಲ್ಪ ದೂರ ಎಳೆದು ಭಕ್ತಿ ಸಮರ್ಪಿಸಿದರು. ಪ್ರತಿ ವರ್ಷದಂತೆ ವೈಶಾಖ ಶುದ್ಧ ಪೂರ್ಣಿಮೆಯಂದು ಜರುಗಿದ ರಥೋತ್ಸವದಲ್ಲಿ ಉಡುಪಿಯ ಪೇಜಾವರ ಶ್ರೀಪಾದಂಗಳವರು, ಟಿ.ಎಸ್.ಗೋಪಾಲಕೃಷ್ಣ ಟಿ.ಪಿ.ವಿಠಲರಾವ್, ಸುಧೀಂದ್ರ, ಟಿ.ಸಿ.ಶ್ರೀನಿವಾಸ್ ಸೇರಿದಂತೆ ನೂರಾರು ಭಕ್ತರು ಹಾಜರಿದ್ದರು. ರಥೋತ್ಸವದ ವೇಳೆ ಮಹಿಳೆಯರು ಪಾಂಡುರಂಗವಿಠಲನನ್ನು ಸ್ಮರಿಸುತ್ತಿದ್ದರೆ. ಪುರುಷರು ಜಾಗಟೆ ಬಾರಿಸುತ್ತಿದ್ದರು. ರಥವನ್ನು ಬಾಳೆಕಂಬ, ವಿವಿಧ ಬಗೆಯ ಹೂವು ಹಾಗೂ ಹಾರಗಳಿಂದ ಅಲಂಕರಿಸಲಾಗಿತ್ತು. ರಥದ ಮುಂಭಾಗ ಹೋಮ ನಡೆಯಿತು.

### ಸಮೀಕ್ಷೆ ವೇಳೆ ಮಡಿವಾಳ ಎಂದೇ ಬರೆಸಲು ಮನವಿ

» ದಾವಣಗೆರೆ

ರಾಜಾದ್ಯಂತ ಮೂರು ಹಂತದಲ್ಲಿ ಜಾತಿ ಗಣತಿ ನಡೆಯುತ್ತಿದ್ದು, ಸಮೀಕ್ಷೆದಾರರು ಮನೆ ಮನೆಗೆ ಸಮೀಕ್ಷೆಗೆ ಬಂದಾಗ ಸಮೀಕ್ಷೆಯಲ್ಲಿ ಗಣತಿದಾರರು ಮಡಿವಾಳ ಸಮುದಾಯದ ಮನೆಗಳಿಗೆ ಬಂದು ಧರ್ಮ ಮತ್ತು ಜಾತಿಯನ್ನು ಕೇಳಿದರೆ ಧರ್ಮದ ಕಾಲಂನಲ್ಲಿ ಹಿಂದೂ ಅಂತಾ, ಹಾಗೂ ಜಾತಿಯ ಕಾಲಂನಲ್ಲಿ ಮಡಿವಾಳ ಎಂದು ಬರೆಸುವಂತೆ ಮಡಿವಾಳ ಮಾಚಿದೇವ ಸಂಘದ ಜಿಲ್ಲಾಧ್ಯಕ್ಷ ಎಂ.ನಾಗೇಂದ್ರಪ್ಪ ತಿಳಿಸಿದರು.

**ಮುಂಗಾರು ವಿಪತ್ತು ನಿರ್ವಹಣೆಗೆ ಸಿದ್ಧತೆ, ಸಿಡಿಲಬ್ಬರ ಮುನ್ನೆಚ್ಚರಿಕೆಗೆ ಆಪ್ ಅಳವಡಿಸಿಕೊಳ್ಳಲು ಸಲಹೆ**

# ತುರ್ತುಸ್ಥಿತಿ ಸಂವಹನಕ್ಕಾಗಿ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸೈರನ್ ಅಳವಡಿಸಿ

» ದಾವಣಗೆರೆ

ರಾಷ್ಟ್ರೀಯ ಹಾಗೂ ಪ್ರಾಕೃತಿಕ ವಿಕೋಪಗಳ ಸಂದರ್ಭಗಳಲ್ಲಿ ಜನರ ಆಸ್ತಿ, ಪಾಸ್ತಿ ನಷ್ಟ ತಡೆಗಟ್ಟಲು ಹಾಗೂ ರಕ್ಷಣೆಗೆ ಅನುಕೂಲವಾಗುವಂತೆ ಎಲ್ಲಾ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ತುರ್ತು ಸಂದರ್ಭದಲ್ಲಿ ಸಂವಹನಕ್ಕಾಗಿ ಸೈರನ್‌ಗಳನ್ನು ಅಳವಡಿಸಬೇಕೆಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚನೆ ನೀಡಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿಅಧ್ಯಕ್ಷತೆವಹಿಸಿಮಾತನಾಡಿದರು. ರಾಷ್ಟ್ರೀಯ ತುರ್ತು ಪರಿಸ್ಥಿತಿ ಮತ್ತು ಪ್ರಕೃತಿ ವಿಪತ್ತುಗಳಿಂದ ಉಂಟಾಗುವ ಸಂದರ್ಭವನ್ನು ನಿಭಾಯಿಸಲು ಮತ್ತು ಈ ವೇಳೆ ತುರ್ತಾಗಿ ಜನರಿಗೆ ಮಾಹಿತಿ ತಲುಪಿಸುವ ಉದ್ದೇಶದಿಂದ ಹಾಗೂ ಜಾಗೃತರಾಗಿರಲು ಎಲ್ಲಾ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮತ್ತು ಪಾಲಿಕೆ ವ್ಯಾಪ್ತಿಯಲ್ಲಿ ಮೂರುಕಡೆ ಸೈರನ್ ಅಳವಡಿಸಬೇಕು. ಈ ಸೈರನ್‌ಗಳನ್ನು ಕನಿಷ್ಠ 50 ಕಿ.ಮೀ ಅಂತರದಲ್ಲಿರುವಂತೆ ನೋಡಿಕೊಳ್ಳಬೇಕೆಂದರು.

ತುರ್ತು ಸಂದರ್ಭದಲ್ಲಿ ಜನರು ಗಾಬರಿಯಾಗಂತೆ ಮತ್ತು ರಕ್ಷಣೆ ಪಡೆಯಲು ಸಲಹೆ ಮತ್ತು ಮುಂಜಾಗ್ರತಾ ಕ್ರಮಗಳ ಸೂಚನೆ ನೀಡಬೇಕು. ವಿಕೋಪದಲ್ಲಿ ಸಿಲುಕಿದಾಗ ರಕ್ಷಣಾತ್ಮಕ ಕ್ರಮಗಳ ಜೊತೆಗೆ ಜೀವಹಾನಿಯನ್ನು ತಡೆಗಟ್ಟಲು ಸನ್ನದ್ದವಾಗಿರಬೇಕು. ಇದಕ್ಕಾಗಿ ಆಸ್ಪತ್ರೆಯಲ್ಲಿನ ತುರ್ತು ನಿಗಾಘಟಕ, ವೈದ್ಯರ ತಂಡ, ರಕ್ಷಣಾತ್ಮಕ ಕ್ರಮಗಳ ಬಗ್ಗೆ ಕ್ಷಿಪ್ರ ಕಾರ್ಯಾಚರಣೆ ಕೈಗೊಳ್ಳುವ ನಿಟ್ಟಿನಲ್ಲಿ 24/7 ಸಿದ್ದರಾಗಿರುವಂತೆ ತಂಡಗಳನ್ನು ರಚನೆ ಮಾಡಿಕೊಳ್ಳಬೇಕೆಂದು ತಿಳಿಸಿ ಈ ನಿಟ್ಟಿನಲ್ಲಿ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಯೋಜನೆ ತಯಾರಿಸಲು ಸೂಚನೆ ನೀಡಿದರು.



ದಾಮಿನಿ ಆಪ್ ಡೌನ್‌ಲೊಡ್ ಮಾಡಿ; ಪೂರ್ವಮುಂಗಾರುಸಂದರ್ಭದಲ್ಲಿಸಿಡಿಲು ಬಡಿದು ಜನರು ಮತ್ತು ಜಾನುವಾರುಗಳು ಅಸುನೀಗುವುದನ್ನು ಕಾಣಲಾಗುತ್ತಿದೆ. ಇದರಿಂದ ತಪ್ಪಿಸಿಕೊಳ್ಳಲು ಸಿಡಿಲಿನ ಮುನ್ನೆಚ್ಚರಿಕೆ ಮಾಹಿತಿ ತಿಳಿದುಕೊಳ್ಳಲು ಮೊಬೈಲ್‌ನಲ್ಲಿ ಪ್ಲೇಸ್ಟೋರ್‌ನಿಂದ ಕೇಂದ್ರ ಸರ್ಕಾರದ ದಾಮಿನಿ ಆಫ್ ಡೌನ್‌ಲೋಡ್ ಮಾಡಿಕೊಂಡಲ್ಲಿ, ಅದು ಮಳೆ ಬರುವಾಗ ತಮ್ಮ ಸುತ್ತಮುತ್ತಲಿನಲ್ಲಿ ಸಿಡಿಲು ಅಪ್ಪಳಿಸುವ ಸಾಧ್ಯತೆಗಳ ಬಗ್ಗೆ ಮಾಹಿತಿ ನೀಡಲಿದೆ. ಇದರಿಂದ ಕುರಿಗಾಯಿಗಳು ಜಾನುವಾರುಗಳ ರಕ್ಷಣೆ ಮತ್ತು ಜೀವ ರಕ್ಷಣೆ ಪಡೆದುಕೊಳ್ಳಬಹುದಾಗಿದೆ ಎಂದರು.

ಮುಂಗಾರು ಅನಾಹುತ ತಡೆಗೆ ಸಿದ್ದರಾಗಿ; ಜೂನ್‌ನಿಂದ ಮುಂಗಾರು ಆರಂಭವಾಗಲಿದೆ ಮತ್ತು ಶಾಲಾ, ಕಾಲೇಜುಗಳು ಆರಂಭವಾಗಲಿವೆ. ಸಿಥಿಲವಾಗಿರುವ ಶಾಲಾ ಕೊಠಡಿಗಳ ದುರಸ್ಥಿಯನ್ನು ತಕ್ಷಣವೇ ಕೈಗೊಂಡು ರಿಪೇರಿ ಮಾಡಿಸಬೇಕು. ಮತ್ತು ತುಂಬಾ ಸಿಥಿಲವಾಗಿರುವ ಕೊಠಡಿಗಳನ್ನುಗುರುತಿಸಿ ರಿಪೇರಿಗೆ ಕ್ರಿಯಾಯೋಜನೆ ತಯಾರಿಸಿ ನೀಡಲು ಉಪನಿರ್ದೇಶಕರಿಗೆ ತಿಳಿಸಿ ಎಲ್ಲಾ ಶಾಲೆಗಳ ಸ್ಥಿತಿಗತಿ ಹಾಗೂ ಸುಸ್ಥಿತಿ ಬಗ್ಗೆ ಆಡಿಟ್ ವರದಿ ಪರಿಶೀಲಿಸಿ ನೀಡಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದವರಿಗೆ ಸೂಚನೆ ನೀಡಿದರು.

ಕೆರೆ, ಕಟ್ಟೆಗಳ ಪರಿಶೀಲನೆ ನಡೆಸಿ; ಜಿಲ್ಲೆಯಲ್ಲಿನ ಕೆರೆಗಳು ಮತ್ತು ಚೆಕ್‌ಡ್ಯಾಂಗಳ ಸುಸ್ಥಿತಿ ಬಗ್ಗೆ ಮತ್ತು ರಸ್ತೆ, ಕಾಲುವೆಗಳಲ್ಲಿನ ಕಿರು ಸೇತುವೆಗಳ ಪರಿಶೀಲನೆ ನಡೆಸಿ ಆಯಾ ಇಲಾಖೆಯವರು ವರದಿ ನೀಡಬೇಕು. ಮಳೆಗಾಲದಲ್ಲಿ ಸೇತುವೆ ದುಸ್ಥಿಯಾಗಿದ್ದಲ್ಲಿ ನೀರಿನಿಂದ ಇದು ಕಾಣದೆ, ಇದರಲ್ಲಿ ಜಾರಿ ಹೋಗುವ ಸಂಭವವಿರುತ್ತದೆ. ಆದ್ದರಿಂದ ಸೇತುವೆ, ಕೆರೆಯ ಏರಿ ಸುಭದ್ರತೆ ಪರಿಶೀಲನೆ ನಡೆಸಲು ಸೂಚನೆ ನೀಡಿದರು. ಇದೇ ವೇಳೆ ಸಣ್ಣ ನೀರಾವರಿ ಇಲಾಖೆ ಇಂಜಿನಿಯರ್ ಅವರು ಕೊಡಗನೂರು ಕೆರೆ ಏರಿಯ ದುರಸ್ಥಿ ಕೆಲಸ ನಡೆಯುತ್ತಿದ್ದು ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳ್ಳಲಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಉಪವಿಭಾಗಾಧಿಕಾರಿ ಸಂತೋಷ್ ಪಾಟೀಲ್, ಅಭಿಷೇಕ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿಪತ್ತು ನಿರ್ವಹಣಾ ಅಣುಕು ಪ್ರದರ್ಶನ

» ಚಿತ್ರದುರ್ಗ

ಚಿತ್ರದುರ್ಗ ನಗರದ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ ವತಿಯಿಂದ ವಿಶ್ವ ರೆಡ್‌ಕ್ರಾಸ್ ದಿನಾಚರಣೆ ಅಂಗವಾಗಿ ಎರಡು ದಿನಗಳ ಪ್ರಥಮ ಚಿಕಿತ್ಸೆ ಮತ್ತು ವಿಪತ್ತು ನಿರ್ವಹಣಾ ತರಬೇತಿ ಕಾರ್ಯಾಗಾರ ನಡೆಯಿತು.

ರೆಡ್‌ಕ್ರಾಸ್ ಮತ್ತು ರೇಂಜರ್ಸ್ ಮತ್ತು ರೋವರ್ಸ್‌ನ ಸ್ವಯಂಸೇವಕರು ತುರ್ತು ಪರಿಸ್ಥಿತಿಯಲ್ಲಿ ಉದ್ಭವಿಸಬಹುದಾದ ಘಟನೆಗಳಿಗೆ ಮುನ್ನೆಚ್ಚರಿಕೆ ಕ್ರಮಗಳು ಕೈಗೊಳ್ಳುವ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ವಿಪತ್ತು ನಿರ್ವಹಣಾ ಅಣಕು ಪ್ರದರ್ಶನ ಹಾಗೂ ಕೃತಕ ಸ್ಫೋಟಗಳು ಸಂಭವಿಸಿ ಅಣಕು ಕವಾಯತು ನಡೆಸಿದರು.

ಅನೇಕ ಜನರು ಗಾಯಗೊಂಡಾಗ ತಕ್ಷಣ ಸ್ವಯಂಸೇವಕರು ಕಾರ್ಯಪ್ರವೃತ್ತರಾಗಿ ಅವರಿಗೆ ಪ್ರಥಮ ಚಿಕಿತ್ಸೆ ನೀಡಿ ಸ್ಟ್ರೇಚರ್ ಬಳಸಿ ಅವರನ್ನು ಸ್ಥಳಾಂತರಿಸಿದರು. ಸಿಪಿಆರ್ ಮತ್ತು ಬ್ಯಾಂಡೇಜಿಂಗ್ ಮಾಡಲಾಯಿತು. ತುರ್ತು ಸಮಯದಲ್ಲಿ ಜೀವ ಉಳಿಸುವ ಕ್ರಮಗಳು



ಅಣಕು ಕವಾಯತು ನಡೆಸಿದರು. ರಾಷ್ಟ್ರಮಟ್ಟದ ತರಬೇತುದಾರ ಡಾ.ಕುಮಾರ್ ವಿ.ಎಲ್.ಎಸ್ ಅವರು ಅಣಕು ಪ್ರದರ್ಶನ ನಿರ್ದೇಶಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಸೋಮಶೇಖರ್ ಅಗಡಿ, ಸರ್ಕಾರಿ ವಿಜ್ಞಾನ ಕಾಲೇಜಿನ ಪ್ರಾಂಶುಪಾಲ ಸಿದ್ದರಾಮ ಚೆನ್ನಗೊಂಡ, ರೆಡ್‌ಕ್ರಾಸ್ ರಾಜ್ಯ ಆಡಳಿತ ಮಂಡಳಿ ಸದಸ್ಯ ಅನಂತ ರೆಡ್ಡಿ, ಕಾರ್ಯದರ್ಶಿ ಮಜಹರ್ ಉಲ್ಲಾ, ಖಜಾಂಚಿ ವಿರೇಶ್, ನಿರ್ದೇಶಕರಾದ ಗುರುಮೂರ್ತಿ, ಶಿವರಾಮ್, ಯುವ ರೆಡ್‌ಕ್ರಾಸ್ ಸಂಯೋಜಕ ಕೃಷ್ಣಮೂರ್ತಿ, ದೈಹಿಕ ಶಿಕ್ಷಣ ನಿರ್ದೇಶಕ ರಾಘವೇಂದ್ರ ಇದ್ದರು.

## ಮಾನವ ಶಾಂತಿಗಾಗಿ ಎಲ್ಲವನ್ನೂ ಪರಿತ್ಯಾಗಮಾಡಿದ ಗೌತಮಬುದ್ಧರ ಆದರ್ಶಗಳು ಸ್ಮರಣೀಯ: ಶಾಸಕ



» ಚಳ್ಳಕೆರೆ

ವೈಭೋಗದ ಬದುಕನ್ನು ತ್ಯಜಿಸಿ ಜ್ಞಾನವನ್ನು ಹುಡುಕಿಹೊರಟ ಗೌತಮಬುದ್ಧ ತಮ್ಮದೇಯಾದ ತತ್ವಸಿದ್ಧಾಂತಗಳ ಮೂಲಕ ಸಮಾಜದಲ್ಲಿ ಪರಿವರ್ತನೆಯ ಪರ್ವವನ್ನು ಸ್ಥಾಪಿಸಿದ ಮಹಾನೀಯರು. ಅಹಿಂಸಾ ಧರ್ಮವನ್ನು ಜಗತ್ತಿಗೆ ಪರಿಚಯಿಸಿದ ಕೀರ್ತಿ ಗೌತಮಬುದ್ಧರದ್ದು ಎಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು. ಅವರು, ಸೋಮವಾರ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಮ್ಮಿಕೊಂಡಿದ್ದ ಬುದ್ಧಜಯಂತಿ ಕಾರ್ಯಕ್ರಮಕ್ಕೆ ಗೌತಮಬುದ್ಧರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಜೀವನದಲ್ಲಿ ಎಲ್ಲಾ ರೀತಿಯ ಸುಖಭೋಗಗಳನ್ನು ಕಂಡ ಗೌತಮಬುದ್ಧ ಬದುಕಿನಲ್ಲಿ ಪರಿವರ್ತನೆಯ ಜೊತೆಗೆ ಶಾಂತಿಯನ್ನು ಸಾರುವ ಉದ್ದೇಶದಿಂದ ಎಲ್ಲಾವನ್ನು ತ್ಯಜಿಸಿ ಜ್ಞಾನದ ಧೀಕ್ಷೆಯನ್ನು ಪಡೆದವರು ಎಂದರು. ಗೌತಮಬುದ್ಧರ ಜೀವನಚರಿತ್ರೆ ಕುರಿತು ಮೈತ್ರಿದ್ಯಾಮಣ್ಣ ಅರ್ಥಗರ್ಭಿತವಾಗಿ ಮಾತನಾಡಿದರು. ತಹಶೀಲ್ದಾರ್ ರೇಹಾನ್‌ಪಾಷ, ಇಒ ಎಚ್.ಶಶಿಧರ, ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ನಗರಸಭೆ ಅಧ್ಯಕ್ಷೆ ಆರ್. ಮಂಜುಳಾ, ಉಪಾಧ್ಯಕ್ಷ ಕವಿತಾಬೋರಯ್ಯ, ಕೆಪಿಸಿ ನಾಮನಿರ್ದೇಶನ ಸದಸ್ಯರಾದ ಬಸವರಾಜು, ರಮೇಶ್, ಸುರೇಶ್‌ಕುಮಾರ್, ನಾಗವೇಣಿ, ಕಂದಾಯಾಧಿಕಾರಿ ತಿಪ್ಪೇಸ್ವಾಮಿ, ಪ್ರಕಾಶ್, ಡಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

## ಕ್ರಿಕೆಟ್ ಹಬ್ಬಕ್ಕೆ ಮುಹೂರ್ತ ಫಿಕ್ಸ್: ಮೇ 16 ರಿಂದ ಐಪಿಎಲ್ ಪುನಾರಂಭ..?

ಭಾರತ–ಪಾಕಿಸ್ತಾನ ಸಂಘರ್ಷದಿಂದಾಗಿ ಅರ್ಧದಲ್ಲೇ ಸ್ಥಗಿತಗೊಂಡಿದ್ದ ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಮೇ 16ರಿಂದ ಪುನಾರಂಭವಾಗುವ ಸಾಧ್ಯತೆಯಿದೆ ಎಂದು ವರದಿಯಾಗಿದೆ. ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ಈ ಬಗ್ಗೆ ಸಿದ್ಧತೆ ಆರಂಭಿಸಿದ್ದು, ಫ್ರಾಂಚೈಸಿಗಳು, ಪಾಲುದಾರರೊಂದಿಗೆ ಮಾತುಕತೆ ನಡೆಸುತ್ತಿದೆ. ಸೋಮವಾರ ವೇಳಾಪಟ್ಟಿ ಪ್ರಕಟಗೊಳ್ಳುವ ನಿರೀಕ್ಷೆಯಿದೆ, ಇದು ಕ್ರಿಕೆಟ್ ಅಭಿಮಾನಿಗಳಿಗೆ, ವಿಶೇಷವಾಗಿ ಬೆಂಗಳೂರು ಫ್ಯಾನ್ಸ್‌ಗೆ ಸಿಹಿ ಸುದ್ದಿಯಾಗಿದೆ. ಗುರುವಾರ ಧರ್ಮಶಾಲಾದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಮತ್ತು ಪಂಜಾಬ್ ಕಿಂಗ್ಸ್ ನಡುವಿನ ಪಂದ್ಯ ಅರ್ಧದಲ್ಲಿ ನಿಂತಿದ್ದರಿಂದ ಶುಕ್ರವಾರ ಟೂರ್ನಿಯನ್ನು ಸ್ಥಗಿತಗೊಳಿಸಲಾಯಿತು. ಆದರೆ ಶನಿವಾರ ಕದನ ವಿರಾಮ ಮಾತುಕತೆ ಯಶಸ್ವಿಯಾದ ಬಳಿಕ, ಬಿಸಿಸಿಐ ಐಪಿಎಲ್ ಮುಂದುವರಿಸಲು ಯೋಜನೆ ರೂಪಿಸಿದೆ. ಬಿಸಿಸಿಐ ಉಪಾಧ್ಯಕ್ಷ ರಾಜೀವ್ ಶುಕ್ಲಾ, ಲೀಗ್ ಪುನಾರಂಭಕ್ಕೆ ಎಲ್ಲಾ ಪ್ರಯತ್ನಗಳನ್ನು ಮಾಡುತ್ತಿದ್ದೇವೆ. ಫ್ರಾಂಚೈಸಿಗಳೊಂದಿಗೆ ಚರ್ಚೆ ನಡೆಯುತ್ತಿದೆ, ಶೀಘ್ರದಲ್ಲೇ ಅಂತಿಮ ತೀರ್ಮಾನ ಕೈಗೊಳ್ಳುತ್ತೇವೆ ಎಂದು ಭಾನುವಾರ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

**ಧಮ್ಮಕೇಂದ್ರದಲ್ಲಿ ಬೌದ್ಧ ಪೌರ್ಣಿಮೆ ಆಚರಣೆ**

# ಬುದ್ಧಗುರುವಿನ ಸತ್ಯ ಸಂದೇಶಗಳು ಎಲ್ಲಾ ಕಾಲಕ್ಕೂ ಪ್ರಸ್ತುತ

» ಚಿತ್ರದುರ್ಗ

ಬುದ್ಧಗುರುವಿನ ಸತ್ಯ ಸಂದೇಶಗಳು ಎಲ್ಲಾ ಕಾಲಕ್ಕೂ ಪ್ರಸ್ತುತವವಾಗಿದೆಎಂದು ಮಾನವ ಬಂಧುತ್ವ ವೇದಿಕೆ ಸಂಚಾಲಕ ತಮಟಕಲ್ಲು ಹನುಮಂತಪ್ಪ ಅಭಿಪ್ರಾಯಪಟ್ಟರು.

ಧಮ್ಮಕೇಂದ್ರದಲ್ಲಿ ವಿಮುಕ್ತಿ ವಿದ್ಯಾ ಸಂಸ್ಥೆ,ಧಮ್ಮ ಸಾಂಸ್ಕೃತಿಕಕೇಂದ್ರಚಿತ್ರದುರ್ಗ ಮತ್ತುಕರ್ನಾಟಕ ಶಾಂತಿ ಮತ್ತು ಸೌಹಾರ್ದ ವೇದಿಕೆ ಇವರ ವತಿಯಿಂದಏರ್ಪಡಿಸಲಾದ್ದ ಬೌದ್ಧ ಪೌರ್ಣಿಮೆ 2588 ನೇ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಬುದ್ಧಗುರುಎಲ್ಲಾ ಕಾಲಕ್ಕೂ ಅನ್ವಯಿಸುವಂತೆ ಸತ್ಯ ಸಂದೇಶವನ್ನು ನೀಡಿದ್ದು.ಇಂದಿಗೂ ಪ್ರಸ್ತುತವಾಗಿದೆಎಂದರು.

ಬುದ್ಧನಕುರಿತು ನನಗೆ ಅರಿವು ಬಂದಿದ್ದುಧಮ್ಮ ಸಾಂಸ್ಕೃತಿಕಕೇಂದ್ರದಲ್ಲಿ ವಿಶ್ವಸಾಗರರವರ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ಬುದ್ಧನ



ವಿಚಾರಧಾರೆಗಳು ಚಿಂತನ–ಮಂಥನ ಕಾರ್ಯುಕ್ರಮಗಳಿಂದಾಗಿಇಲ್ಲಿಎಲ್ಲಾವನ್ನೂ ಪಡೆದುಕೊಳ್ಳುವಂತಾಯಿತು ಎಂದರು.

ಕಳೆದ ಹತ್ತು ಹದಿನೈದು ವರ್ಷಗಳಿಂದ ಧಮ್ಮಕೇಂದ್ರದಲ್ಲಿ ಬುದ ್ಧನಕುರಿತುಅಧ್ಯಯನ,ಸಂಶೋಧನೆ ಮತ್ತು ಬುದ್ಧಕಲ್ಪನೆಯನ್ನು ಬೆಳೆಸಲಾಗುತ್ತಿದೆ ಎಂದವರು,ಧಮ್ಮಕೇಂದ್ರದಲ್ಲಿ ಮನುಷ್ಯರಿಗಷ್ಟೇಅಲ್ಲದೇ ಪ್ರಾಣಿ,ಪಕ್ಷಿಗಳಿಗೂ ಬದುಕುವಂತಹ ವಾತಾವರಣವನ್ನು ನಿರ್ಮಾಣಮಾಡಲಾಗಿದ್ದು..ಇದಕ್ಕೇಲ್ಲಾ ಬುದ್ಧನಆದರ್ಶಗಳು,ಮಾರ್ಗದರ್ಶನಗಳೇ ಕಾರಣವಾಗಿದೆಎಂದು ನುಡಿದರು.

ಬುದ್ಧ ಬೋಧನೆ ಮಾಡಿದ್ದು,ಶಾಂತಿ,ಪ್ರೀತಿ,ಕರುಣೆ,ಕಾರುಣ್ಯಗಳೇ ವಿನ; ಎಲ್ಲಾಕೂಡ ತಾರತಮ್ಮಗಳನ್ನು ಬೋಧನೆ ಮಾಡಲಿಲ್ಲ ಎಂದು ಹನುಮಂತಪ್ಪ ನುಡಿದರು.

ಕರ್ನಾಟಕ ವಿದ್ಯಾರ್ಥಿ ಸಂಘಟನೆಯ ಮುಖಂಡ ಸರೋವರ್ ಬೆಂಕಿಕೆರೆಅವರು ಮಾತನಾಡಿದ ಬುದ್ಧತನ್ನಜೀವಿತಕಾಲದಲ್ಲಿ ಸಂಘಟನೆಯ ಮೂಲಕ ಬೋಧನೆ ಮಾಡಿದ್ದು.ಅಷ್ಟ ಮಾರ್ಗಗಳನ್ನು ಮತ್ತು ಪಂಚಶೀಲಗಳನ್ನು ಹಾಗಾಗಿ ಬೌದ್ಧಧಮ್ಮವನ್ನುಜನಸಾಮಾನ್ಯರ ಮಟ್ಟಕ್ಕೆಕೊಂಡೊಯ್ಯಲು ಸಾಧ್ಯವಾಯಿತು ಅಂದರು. ಕರ್ನಾಟಕ ಶಾಂತಿ ಮತ್ತು ಸೌಹಾರ್ದ ವೇದಿಕೆ ಅಧ್ಯಕ್ಷ ನರೇನಹಳ್ಳಿ ಅರುಣ್‌ಕುಮಾರ್‌ಅವರು ಮಾತನಾಡಿ ಬುದ್ಧಗುರುವಿನ ಸಂದೇಶಗಳು ಸತ್ಯ ಮತ್ತುಜೀವಪರದಿಂದಕೂಡಿದ್ದು.ಎಲ್ಲಾ ಧಮ್ಮಗಳಿಗೂ ಪ್ರೀತಿಸುವಗುಣವನ್ನು ಬೌದ್ಧಧಮ್ಮದಲ್ಲಿ ನೀಡುವ ಮೂಲಕ ಸಮಾಜದ ನೆಮ್ಮದಿಗಾಗಿ ಬುದ್ಧನ ಸಂದೇಶಗಳು ಅಗತ್ಯವೆಂದು ನುಡಿದರು.

ಬುದ್ಧಜಯಂತಿಯ ಪ್ರಯುಕ್ತಧಮ್ಮ ಕೇಂದ್ರದಲ್ಲಿ ಅಂಗುಲಿ ಮಾಲಾ,ಬುದ್ಧನ ವಿಚಾರಧಾರೆಗಳನ್ನು ಒಳಗೊಂಡ ರೂಪಕಗಳನ್ನುಪ್ರದರ್ಶನಮಾಡಲಾಯಿತು. ಬುದ್ಧಜಯಂತಿಆಚರಣೆಯ ಸಮಾರಂಭದಲ್ಲಿ ವಿಮುಕ್ತಿ ವಿದ್ಯಾ ಸಂಸ್ಥೆಯ ನಿರ್ದೇಶಕರಾದಆರ್.ವಿಶ್ವಸಾಗರ್, ಅಧ್ಯಕ್ಷರಾದ ಶ್ರೀಮತಿ ಅನ್ನಪೂರ್ಣ, ಅರಣ್ಯ ಸಾಗರ್,ನಾಗರತ್ನ,ಬೀಬಿಜಾನ್, ನಾಗಪ್ಪ,ಡಾ.ರಹಮ್‌ತ್ ವುಲ್ಲಾ,ಜುಬೇರ್ ಮಸೀದಿಯ ಮುಖ್ಯಸ್ಥರು,ಬಸವರಾಜ್,ಅಲೆಮಾರಿಜನಾಂಗದ ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T